₹ 6 @vishwavaninews epaper.vishwavani.news vishwavani.news ಬೆಂಗಳೂರು | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ ಮಂಗಳವಾರ 31.12.2024 ಸಂಪುಟ: 10 ಸಂಚಿಕೆ:07 ಪುಟಗಳು: 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಸೂರ್ಯನ ಕೈಹಿಡಿಯಲಿರುವ
ಚಂದ್ರ ಚಕೋರಿ

ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯಗೆ ಕಂಕಣ ಭಾಗ್ಯ
ಚೆನ್ನೈ ಮೂಲದ ಗಾಯಕಿ ಸಿವಶ್ರೀ ಜತೆ ಮಾರ್ಚ್ 4ಕ್ಕೆ ವಿವಾಹ



ಬೆಂಗಳೂರು: 'ಯಂಗ್ ಆ್ಯಂಡ್ ಡೈನಾಮಿಕ್' ಮತ್ತು 'ಮೋಸ್ಟ್ ಎಲಿಜಿಬಲ್ ಬ್ಯಾಚುಲರ್' ಸಂಸದ ಎಂದೇ ಕರೆಯಿಸಿಕೊಂಡಿರುವ ತೇಜಸ್ವಿ ಸೂರ್ಯ ಅವರ ವಿವಾಹ ಯಾವಾಗ ಎನ್ನುವ ಪ್ರಶ್ನೆ ಪದೇ ಪದೆ ಚರ್ಚೆಗೆ ಬರುವ ವಿಷಯ. ಹಲವು ಸಂದರ್ಭಗಳಲ್ಲಿ ಈ ಬಗ್ಗೆ ತೇಜಸ್ವಿ ಸೂರ್ಯ ಅವರನ್ನೇ ಕೇಳಿದ್ದರೂ ಅವರು ಗುಟ್ಟನ್ನು ರಟ್ಟು ಮಾಡಿರಲಿಲ್ಲ. ಆದರೀಗ ಹೆಚ್ಚು ಸದ್ದಿಲ್ಲದೇ, ಸೂರ್ಯ 'ಚಂದ್ರ' ಚಕೋರಿಯನ್ನು ವರಿಸಲು ಸಿದ್ಧತೆ ನಡೆಸಿದ್ದಾರೆ ಎಂದು ಗೊತ್ತಾಗಿದೆ. ಸಂಸದ ತೇಜಸ್ವಿ ಸೂರ್ಯ ಅವರು ಇದೀಗ ಗಾಯಕಿ, ಭರತನಾಟ್ಯ ಕಲಾವಿದೆಯಾಗಿರುವ ಚೆನ್ನೈ ಮೂಲದ ಸಿವಶ್ರೀ ಸ್ಕಂದಕುಮಾರ್ ಎನ್ನುವವರನ್ನು ವರಿಸಲು ಸಜ್ಜಾಗಿದ್ದಾರೆ. ಈಗಾಗಲೇ ಎರಡು ಕುಟುಂಬಗಳೂ ಈ ವಿವಾಹಕ್ಕೆ ಒಪ್ಪಿಗೆಯ ಮುದ್ರೆ ಹಾಕಿದ್ದು, ಮಾರ್ಚ್ 4ಕ್ಕೆ ವಿವಾಹ ನಡೆಯಲಿದೆ ಎಂದು ಆಪ್ತ ಮೂಲಗಳು ತಿಳಿಸಿವೆ. ಈ ಮೂಲಕ ಬಹಳ ದಿನಗಳಿಂದ ಅಸಂಖ್ಯ ಯುವತಿಯರ 'ನಿದ್ದೆ ಕದ್ದ' ಸಂಸದನಿಗೆ ಕಂಕಣ ಭಾಗ್ಯ ಕೂಡಿ ಬಂದಿದೆ.

ವಿಶ್ವವಾಣಿ ವಿಶೇಷ

ತೇಜಸ್ವಿ ಸೂರ್ಯ ಅವರ ವಿವಾಹ ಮಾರ್ಚ್ 4ಕ್ಕೆ ನಿಗದಿಯಾಗಿದೆ ಎಂದು ಮೂಲಗಳು ತಿಳಿಸಿದ್ದರೂ ಈ ಬಗ್ಗೆ ತೇಜಸ್ವಿ ಸೂರ್ಯ ಅಥವಾ ಸಿವಶ್ರೀ ಸ್ಕಂದಪ್ರಸಾದ್ ಅವರು ಬಹಿರಂಗವಾಗಿ ಎಲ್ಲಿಯೂ ಹೇಳಿಕೊಂಡಿಲ್ಲ. ವಿವಾಹ ನಡೆಯುವ ಸ್ಥಳ ಸೇರಿದಂತೆ ಹಲವು ಅಂಶಗಳು ಇನ್ನಷ್ಟೇ ಬಹಿರಂಗವಾಗಬೇಕಿದೆ.

29 ವರ್ಷಕ್ಕೆ ಬೆಂಗಳೂರು ಸಂಸದನಾಗಿ ಲೋಕಸಭೆಗೆ ಆಯ್ಕೆಯಾಗಿದ್ದ ತೇಜಸ್ವಿ ಸೂರ್ಯ ಅವರು ತಮ್ಮ 34ನೇ ವಯಸ್ಸಿಗೆ ಎರಡನೇ ಬಾರಿಗೆ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಸಂಸದರಾಗಿದ್ದರೂ, ತೇಜಸ್ವಿ ಸೂರ್ಯ ಅವರು ಸೈಕ್ಲಿಂಗ್, ವಾಕಥಾನ್ ಸೇರಿದಂತೆ ವಿವಿಧ ಕ್ರೀಡಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಗೆಲುವು ಸಾಧಿಸಿದ್ದಾರೆ. ಇತ್ತೀಚೆಗೆ ಗೋವಾದಲ್ಲಿ ನಡೆದ ಐರನ್ ಮ್ಯಾನ್ ಮ್ಯಾರಥಾನ್‌ನಲ್ಲಿ ಗೆಲ್ಲುವ ಮೂಲಕ ಈ ಸ್ಪರ್ಧೆಯಲ್ಲಿ ಗೆಲುವು ಸಾಧಿಸಿದ ಮೊದಲ ಸಂಸದ ಎನಿಸಿಕೊಂಡಿದ್ದಾರೆ. ಈ ಸ್ಪರ್ಧೆಯಲ್ಲಿ ಸಿವಶ್ರೀ ಅವರೂ ಭಾಗವಹಿಸಿದ್ದರೆನ್ನುವುದು ವಿಶೇಷ.

ಯಾರೀಕೆ ಸಿವಶ್ರೀ ಸ್ಕಂದಪ್ರಸಾದ್?

ಸಿವಶ್ರೀ ಸ್ಕಂದಪ್ರಸಾದ್ ಅವರು ಶಾಸ್ತ್ರೀಯ ಸಂಗೀತ ಗಾಯಕಿ ಹಾಗೂ ಭರತನಾಟ್ಯ ಕಲಾವಿದೆ. ಶಾಸ್ತ್ರ ವಿಶ್ವವಿದ್ಯಾಲಯದಲ್ಲಿ ಬಯೋ ಎಂಜಿನಿಯರಿಂಗ್ ವಿಷಯದಲ್ಲಿ ಬಿ.ಟೆಕ್ ಪದವಿ ಪಡೆದಿದ್ದಾರೆ. ಇದರೊಂದಿಗೆ ಮದ್ರಾಸ್ ವಿಶ್ವವಿದ್ಯಾಲಯದಿಂದ ಭರತನಾಟ್ಯದಲ್ಲಿ ಎಂಎ ಪದವಿ, ಮದ್ರಾಸ್ ಸಂಸ್ಕೃತ ಕಾಲೇಜಿನಲ್ಲಿ ಸಂಸ್ಕೃತ ಎಂಎ ಪದವಿ ಪಡೆದು ಕೊಂಡಿದ್ದಾರೆ. ಇದರೊಂದಿಗೆ ಸೈಕ್ಲಿಂಗ್, ಟ್ರೆಕ್ಕಿಂಗ್ ವಾಕಥಾನ್‌ಗಳಲ್ಲಿಯೂ ಆಸಕ್ತಿ ಹೊಂದಿದ್ದಾರೆ. ಸಿವಶ್ರೀ ಅವರ ಯೂಟ್ಯೂಬ್ ಚಾನೆಲ್‌ಗೆ ಸುಮಾರು ಎರಡು ಲಕ್ಷ ಫಾಲೋವರ್ಸ್ ಇದ್ದಾರೆ.

ವಿವರಪುಟ → 5

ಪ್ರಿಯಾಂಕ್ ಖರ್ಗೆ ಮನವಿ ಬೆನ್ನಲ್ಲೇ ಸಿಎಂ ಆದೇಶ
ಸಚಿನ್ ಆತ್ಮಹತ್ಯೆ ಸಿಐಡಿ ತನಿಖೆಗೆ

ಬೆಂಗಳೂರು: ರಾಜ್ಯದಲ್ಲಿ ಭಾರಿ ವಿವಾದಕ್ಕೆ ಕಾರಣವಾಗಿರುವ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣವನ್ನು ಸಿಐಡಿಗೆ ವಹಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೆಸರು ಕೇಳಿಬಂದಿದೆ. ಡೆತ್‌ನೋಟ್‌ನಲ್ಲಿ ಖರ್ಗೆ ಆಪ್ತ ರಾಜು ಎನ್ನುವವರ ಹೆಸರು ಬರೆದು ಆತ್ಮಹತ್ಯೆ ಮಾಡಿಕೊಂಡಿರುವುದರಿಂದ, ಸಚಿವ ಸ್ಥಾನಕ್ಕೆ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಆಗ್ರಹಿಸುತ್ತಿದೆ. ಈ ಪ್ರಕರಣದಲ್ಲಿ ತಮ್ಮ ಪಾತ್ರವಿಲ್ಲವೆಂದು ಈಗಾಗಲೇ ಸ್ಪಷ್ಟಪಡಿಸಿರುವ ಪ್ರಿಯಾಂಕ್ ಖರ್ಗೆ, ಇದೀಗ ಇಡೀ ಪ್ರಕರಣದ ಸಮಗ್ರ ತನಿಖೆಯನ್ನು ಸಿಐಡಿಯಿಂದ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದರು. ಇದರ ಬೆನ್ನಲ್ಲೇ ಪ್ರಕರಣವನ್ನು ಸಿಐಡಿಗೆ ವಹಿಸಲು ಸರಕಾರ ಮುಂದಾಗಿದೆ.

ಸಿಬಿಐಗೆ ವಹಿಸಲು ಬಿಜೆಪಿ ಆಗ್ರಹ: ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ, ಈ ಹಿಂದೆ ಈ ರೀತಿಯ ಆರೋಪ ಕೇಳಿಬಂದಾಗ ಸಚಿವರ ರಾಜೀನಾಮೆ ಪಡೆದಿರುವ ಉದಾಹರಣೆ ಇದೆ. ಬಿಜೆಪಿಯ ಈಶ್ವರಪ್ಪ ಅವರೂ ರಾಜೀನಾಮೆ ನೀಡಿದ್ದರು. ಆದ್ದರಿಂದ ಪ್ರಿಯಾಂಕ್ ವಿರುದ್ಧ ಕೇಳಿಬಂದಿರುವ ಆರೋಪದ ತನಿಖೆ ಮುಗಿಯುವ ತನಕ ಅವರು ರಾಜೀನಾಮೆ ನೀಡಬೇಕು. ಪ್ರಕರಣವನ್ನು ಸಿಐಡಿಯಿಂದ ತನಿಖೆ ನಡೆಸಿದರೆ ನ್ಯಾಯ ಸಿಗುವುದಿಲ್ಲವೆಂದು ಈಗಾಗಲೇ ಕುಟುಂಬಸ್ಥರು ಹೇಳಿರುವುದರಿಂದ, ಇಡೀ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಬಿಜೆಪಿಗರು ಆಗ್ರಹಿಸಿದ್ದಾರೆ.

ಬಿಜೆಪಿ ಆಗ್ರಹವೇನು?

- ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವರ ಪಿಎ ಹೆಸರಿದೆ
- ಆದ್ದರಿಂದ ಈ ಕೂಡಲೇ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಲಿ
- ಪ್ರಕರಣವನ್ನು ಸಿಐಡಿ ಬದಲಿಗೆ ಸಿಬಿಐನಿಂದ ತನಿಖೆಯಾಗಬೇಕು
- ಈಶ್ವರಪ್ಪ ವಿರುದ್ಧ ದೂರು ಬಂದಾಗ ರಾಜೀನಾಮೆ ನೀಡಿದಂತೆ ಪ್ರಿಯಾಂಕ್ ನೀಡಲಿ

ಕಾಂಗ್ರೆಸ್ ವಾದವೇನು?

- ಗುತ್ತಿಗೆದಾರ ಸಚಿವ ಪ್ರಕರಣಕ್ಕೂ ಪ್ರಿಯಾಂಕ್ ಖರ್ಗೆಗೂ ಸಂಬಂಧವಿಲ್ಲ
- ಹೆಚ್ಚುವರಿ ತನಿಖೆ ನಡೆಯಬೇಕು ಎನ್ನುವ ಕಾರಣಕ್ಕೆ ಸಿಐಡಿಗೆ ವರ್ಗಾವಣೆ
- ಬಿಜೆಪಿ ಹೇಳಿದ ಮಾತ್ರಕ್ಕೆ ಪ್ರಕರಣವನ್ನು ಸಿಬಿಐಗೆ ವಹಿಸುವ ಅಗತ್ಯವಿಲ್ಲ
- ಡೆತ್‌ನೋಟ್‌ನಲ್ಲಿ ಪ್ರಿಯಾಂಕ್ ಹೆಸರಿಲ್ಲ. ಆದ್ದರಿಂದ ರಾಜೀನಾಮೆ ಅಗತ್ಯವಿಲ್ಲ

ಸಚಿನ್ ದುಡ್ಡು ಕೊಡಬೇಕಿತ್ತು

ಗುತ್ತಿಗೆದಾರ ಸಚಿನ್ ಪಾಂಚಾಳ್ ಅವರ ಆತಹತ್ಯೆ ಪ್ರಕರಣಕ್ಕೆ ತಿರುವು ದೊರೆತಿದ್ದು, ಆರೋಪಿ ರಾಜ ಕಪನೂರು ಅವರ ಸಹೋದರ ಪ್ರಕಾಶ್ ಕಪನೂರು ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ. ಅದರಲ್ಲಿ ರಾಜು ಕಪನೂರು ಅವರಿಗೆ ಸಚಿನ್ 60 ಲಕ್ಷ ನೀಡಬೇಕಿತ್ತು ಎನ್ನುವ ಮಾಹಿತಿಯಿದೆ.

ಫೋಟೋ ಬಿಡುಗಡೆ ಮಾಡಿದ ವಿಜಯೇಂದ್ರ

ಗುತ್ತಿಗೆದಾರ ಸಚಿನ್ ಡೆತ್‌ನೋಟ್‌ನಲ್ಲಿ ಪ್ರಸ್ತಾಪಿಸಿರುವ ರಾಜು ಎನ್ನುವ ವ್ಯಕ್ತಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವ ಪ್ರಿಯಾಂಕ್ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ನಾಯಕರೊಂದಿಗೆ ಇರುವ ಫೋಟೋಗಳನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬಿಡುಗಡೆಗೊಳಿಸಿದ್ದಾರೆ.

ಸಿಬಿಐ ತನಿಖೆಗೆ ಸಚಿನ್ ಕುಟುಂಬವೂ ಒತ್ತಾಯಿಸಿದೆ. ಈ ಹಿಂದೆ ಸಚಿವ ನಾಗೇಂದ್ರ ಅವರು ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ. ಆದ್ದರಿಂದ ಒಂದು ಕ್ಷಣವೂ ತಡ ಮಾಡದೆ ಪ್ರಿಯಾಂಕ್ ಖರ್ಗೆಯವರ ರಾಜೀನಾಮೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪಡೆದುಕೊಳ್ಳಬೇಕು.

- ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ಮೊದಲು ದಾಖಲೆ ತೋರಿಸಿ ರಾಜೀನಾಮೆ ಕೇಳಲಿ. ಅದು ಬಿಟ್ಟು ಆರೋಪ ಮಾಡಿದಾಕ್ಷಣ ರಾಜೀನಾಮೆ ಕೊಡಬೇಕೆ? ನಮ್ಮ ಮನೆಗೆ ಮುತ್ತಿಗೆ ಹಾಕಲಿ, ಬೇಡ ಅಂದವರು ಯಾರು? ಜನರು ನಗುತ್ತಿದ್ದಾರೆ, ದಾಖಲೆ ಇಲ್ಲದೆ ಯಾಕೆ ಪ್ರತಿಭಟನೆ ಮಾಡುತ್ತಾರೆ? ಏನಂಥ ಮುತ್ತಿಗೆ ಹಾಕುತ್ತೀರಿ? ನಿಮಗೆ ನಾಚಿಕೆ ಆಗಬೇಕು.

- ಪ್ರಿಯಾಂಕ್ ಖರ್ಗೆ ಸಚಿವ

ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಪಾತ್ರವಿಲ್ಲ. ಆತ್ಮಹತ್ಯೆ ಪತ್ರದಲ್ಲಿ ಅವರ ವಿರುದ್ಧ ನೇರ ಆರೋಪವಿಲ್ಲ. ಬೇರೆಯವರ ಮೇಲೆ ಆರೋಪ ಮಾಡಿದಾಕ್ಷಣ ಇವರು ರಾಜೀನಾಮೆ ನೀಡಲು ಸಾಧ್ಯ ವಿಲ್ಲ. ಪ್ರಿಯಾಂಕ್ ಖರ್ಗೆ ಪ್ರಾಮಾಣಿಕತೆ ಬಗ್ಗೆ ನಮಗೆ ಗೊತ್ತಿದೆ. ಗುತ್ತಿಗೆದಾರನ ಸಾವಿನ ಬಗ್ಗೆ ಕಾನೂನು ಪ್ರಕಾರ ತನಿಖೆ ನಡೆಯುತ್ತದೆ.

- ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ

ಪುಟ ತೆರೆದಂತೆ...

ಪರೀಕ್ಷೆ ನಡೆಸುವ ಆಯೋಗದ ಮೌಲ್ಯ ಹೆಚ್ಚಲಿ!
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ
ಸಂ.ಪುಟ | 6

ಬದಲಾದ ಮೌಲ್ಯ, ಬದಲಾದ ಶಿಕ್ಷಣ!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ
ಸಂ.ಗಮ | 7

ಮಾತಂದ್ರೆ ಮಾತು

ಕೇರಳ ಮಿನಿ ಪಾಕಿಸ್ತಾನ. ಅದಕ್ಕಾಗಿಯೇ ರಾಹುಲ್ ಗಾಂಧಿ ಹಾಗೂ ಅವರ ಸಹೋದರಿ ಅಲ್ಲಿಂದ ಗೆಲುವು ಸಾಧಿಸಿದ್ದಾರೆ. ಎಲ್ಲ ಭಯೋತ್ಪಾದಕರು ಅವರಿಗೆ ಮತ ಹಾಕುತ್ತಾರೆ. ನಾನು ಸತ್ಯವನ್ನೇ ಹೇಳುತ್ತಿದ್ದೇನೆ. ಇವರೆಲ್ಲಾ ಭಯೋತ್ಪಾದಕರ ನೆರವಿನಿಂದ ಸಂಸದರಾಗುತ್ತಿದ್ದಾರೆ.

-ನಿತೇಶ್ ರಾಣೆ
ಮೀನುಗಾರಿಕಾ ಸಚಿವ, ಮಹಾರಾಷ್ಟ್ರ

ದಾರಿದೀಪೋಕ್ತಿ

ಯಾವತ್ತೂ ನಾಳೆ ಮಾಡುತ್ತೇನೆ ಎಂದು ಹೇಳಬಾರದು. ಈ ದಿನವೇ ಮಾಡುತ್ತೇನೆ, ಈಗಲೇ ಮಾಡುತ್ತೇನೆ ಎಂಬ ಮನೋಭಾವ ಬೆಳೆಸಿಕೊಳ್ಳಬೇಕು. ಅವೆಷ್ಟೋ ದಿನಗಳಿಂದ ನೀವು ಇವತ್ತಿನ ಆಗಮನಕ್ಕೆ ಕನವರಿಸುತ್ತಿರಬಹುದು. ನಾಳೆ ಬರುವುದೋ, ಇಲ್ಲವೋ ಯಾರಿಗೆ ಗೊತ್ತು?

ವಕ್ರತುಂಡೋಕ್ತಿ

ಎಲ್ಲರಿಗೂ ಮಕ್ಕಳನ್ನು ಹೇಗೆ ಬೆಳೆಸಬೇಕು ಎಂಬುದು ಗೊತ್ತು, ಹೆತ್ತವರ ಹೊರತಾಗಿ.

ಕೆಎಸ್‌ಡಿಎಲ್ ಅಧಿಕಾರಿ ಆತ್ಮಹತ್ಯೆ

ಬೆಂಗಳೂರು: ಕರ್ನಾಟಕ ಸಾಬೂನು ಹಾಗೂ ಮಾರ್ಜಕ ನಿಯಮಿತ (ಕೆಎಸ್‌ಡಿಎಲ್) ಖರೀದಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ.

ಅಮೃತ್ ಶಿರೂರು (42) ಆತ್ಮಹತ್ಯೆಗೆ ಶರಣಾದ ಅಧಿಕಾರಿ. ಅಮೃತ್ ಅವರು ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಸವಾಗಿದ್ದರು. ಡಿ.28ರ ಸಂಜೆ 5ಗಂಟೆ ಸುಮಾರಿಗೆ ಆತ್ಮಹತ್ಯೆಗೆ ಶರಣಾಗಿದ್ದಾರೆ. ಘಟನೆ ಸಂಬಂಧ ಪರಿಶೀಲನೆ ನಡೆಸಿ ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸುಚಿರ್ ಸಾವಿನ ಬಗ್ಗೆ ಮಸ್ಕ್ ಶಂಕೆ

ವಾಷಿಂಗ್ಟನ್: ಅಮೆರಿಕದಲ್ಲಿ ಕೆಲಸ ಮಾಡುತ್ತಿದ್ದ ಓಪನ್ ಎಐ ಕಂಪನಿ ಉದ್ಯೋಗಿ ಹಾಗೂ ಅನ್ಯಾಯಗಳ ವಿರುದ್ಧ ಸದಾ ಧ್ವನಿ ಎತ್ತುತ್ತಿದ್ದ ಸುಚಿರ್ ಬಾಲಾಜಿ ಅವರ ಸಾವು ಆತ್ಮಹತ್ಯೆಯಂತೆ ಕಾಣುತ್ತಿಲ್ಲ ಎಂದು ಸ್ಪೇಸ್ ಎಕ್ಸ್‌ನ ಮುಖ್ಯಸ್ಥ ಇಲಾನ್ ಮಸ್ಕ್ ಅನುಮಾನ ವ್ಯಕ್ತಪಡಿಸಿದ್ದಾರೆ.

ಸುಚಿರ್ ಅವರ ತಾಯಿ ಪೂರ್ಣಿಮಾ ರಾಮರಾವ್ ಅವರೂ, ಇದೊಂದು ವ್ಯವಸ್ಥಿತ ಸಂಚು ರೂಪಿಸಿದ ಕೊಲೆಯಾಗಿದ್ದು, ಈ ಕುರಿತು ಎಫ್‌ಬಿಐ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಪೂರ್ಣಿಮಾ ಅವರ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಮಸ್ಕ್, 'ಇದು ಆತ್ಮಹತ್ಯೆಯಂತೆ ಕಾಣಿಸುತ್ತಿಲ್ಲ' ಎಂದಿದ್ದಾರೆ.

ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆ; ಶೇ.50 ಅಭ್ಯರ್ಥಿಗಳು ಗೈರು

ಬೆಂಗಳೂರು: ಡಿ.29 ರಂದು ನಡೆದ ಕೆಎಎಸ್ ಪೂರ್ವಭಾವಿ ಮರು ಪರೀಕ್ಷೆಗೆ ಅರ್ಧದಷ್ಟು ಅಭ್ಯರ್ಥಿಗಳು ಗೈರಾಗಿದ್ದಾರೆ. ಒಟ್ಟು 2,10,916 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಆ ಪೈಕಿ 1,01,237 ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದು, 1,09,673 ಗೈರು ಹಾಜರಾಗಿದ್ದಾರೆ.

ಮಲೆಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ

ಬೆಂಗಳೂರು: ಚಾಮರಾಜನಗರ ಜಿಲ್ಲೆಯ ಪ್ರಮುಖ ಪ್ರೇಕ್ಷಣೀಯ ಸ್ಥಳವಾಗಿರುವ ಮಲೆಮಹದೇಶ್ವರ ಬೆಟ್ಟದಲ್ಲಿ ಜನವರಿ ಮೂರನೇ ವಾರ ಸಚಿವ ಸಂಪುಟ ಸಭೆ ನಡೆಸಲು ಸರಕಾರ ತೀರ್ಮಾನಿಸಿದ್ದು, ಈಗಾಗಲೇ ಅಗತ್ಯ ಸಿದ್ಧತೆ ಆರಂಭಿಸಿದೆ. 2002ರಲ್ಲಿ ಎಸ್.ಎಂ.ಕೃಷ್ಣ ಅವರು ಬಿಳಿಗಿರಿ ರಂಗನ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿದ್ದರು. ಬಳಿಕ ಜಿಲ್ಲೆಯಲ್ಲಿ ನಡೆಯುತ್ತಿರುವ ಎರಡನೇ ಸಚಿವ ಸಂಪುಟ ಸಭೆ ಇದಾಗಿದೆ.

ಅಮೆರಿಕ ಮಾಜಿ ಅಧ್ಯಕ್ಷ ಜಿಮ್ಮಿ ಕಾರ್ಟರ್ ನಿಧನ

ವಾಷಿಂಗ್ಟನ್: ಅಮೆರಿಕದ 39ನೇ ಅಧ್ಯಕ್ಷರಾಗಿದ್ದ ಜಿಮ್ಮಿ ಕಾರ್ಟರ್ (100) ಜಾರ್ಜಿಯಾದ ಪ್ಲೇನ್ಸ್‌ನಲ್ಲಿರುವ ಅವರ ಮನೆಯಲ್ಲಿ ನಿಧನರಾಗಿದ್ದಾರೆ. ಜಾಕ್, ಚಿಪ್, ಜೆಫ್, ಆ್ಯಮಿ ಎಂಬ ನಾಲ್ವರು ಮಕ್ಕಳನ್ನು ಅಗಲಿರುವ ಜಿಮ್ಮಿ ಅವರಿಗೆ 11 ಮಂದಿ ಮೊಮ್ಮಕ್ಕಳು, 14 ಮಂದಿ ಮರಿಮೊಮ್ಮಕ್ಕಳಿದ್ದಾರೆ. 1977ರಿಮದ 1981ರವರೆಗೆ ಅವರು ಅಮೆರಿಕ ಅಧ್ಯಕ್ಷರಾಗಿದ್ದರು. 1777ರಲ್ಲಿ ತುರ್ತು ಪರಿಸ್ಥಿತಿ ತೆರವಾದ ಬಳಿಕ ಭಾರತಕ್ಕೆ ಭೇಟಿ ನೀಡಿದ್ದರು. ಅದರ ಗೌರವಾರ್ಥವಾಗಿ ಹರಿಯಾಣದ ಗ್ರಾಮಕ್ಕೆ ಕಾರ್ಟರ್‌ಪುರಿ ಎಂದು ಹೆಸರಿಡಲಾಗಿತ್ತು. ಅಮೆರಿಕ ಅಧ್ಯಕ್ಷ ಜೋ ಬೈಡನ್, ಪ್ರಧಾನಿ ನರೇಂದ್ರ ಮೋದಿ ಸೇರಿ ಹಲವು ದೇಶಗಳ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಪ್ರಕರಣದ ದಿಕ್ಕು ತಪ್ಪಿಸುತ್ತಿರುವ ಪೊಲೀಸರ ವಿರುದ್ಧ ಕ್ರಮಕ್ಕೆ ಆಗ್ರಹ
ರಾಜಭವನ ಮೆಟ್ಟಿಲೇರಿದ ಲಕ್ಷ್ಮೀ-ರವಿ ಗದ್ದಲ

ಬೆಂಗಳೂರು: ರಾಜ್ಯದಲ್ಲಿ ಸಾಕಷ್ಟು ವಿವಾದಕ್ಕೆ ಕಾರಣವಾದ 'ಆ' ಪದ ಬಳಕೆಯ ಪ್ರಕರಣ ರಾಜಭವನದ ಮೆಟ್ಟಿಲೇರಿದೆ.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ಬಿಜೆಪಿ ಮುಖಂಡರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಸೋಮವಾರ ದೂರು ನೀಡಿದ್ದು, ಬೆಳಗಾವಿಯಲ್ಲಿ ನಡೆದ ಘಟನಾವಳಿಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಈ ಪ್ರಕರಣದ ದಿಕ್ಕು ತಪ್ಪಿಸುತ್ತಿರುವ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಇತ್ತೀಚೆಗೆ ಬಿಜೆಪಿ ನಿಯೋಗ ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ದೂರು ನೀಡಿತ್ತು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿ.ಟಿ.ರವಿ, ಕಾಂಗ್ರೆಸ್ ಸರಕಾರ ಹತೆ, ಆತ್ಮಹತ್ಯೆಗಳ ರಾಜ್ಯವನ್ನಾಗಿ ಮಾಡಿದೆ. ಜತೆಗೆ ಇಬ್ಬಗೆ ನೀತಿ ಅನುಸರಿಸುತ್ತಿದೆ. ನನ್ನ ವಿರುದ್ಧ ದೂರು ದಾಖಲಾದ ತಕ್ಷಣ ಬಂಧಿಸಲಾಯಿತು. ಇಡೀ ರಾತ್ರಿ ಓಡಾಡಿಸಿ ನಿರ್ಜನ ಪ್ರದೇಶದಲ್ಲಿ ಎನ್‌ಕೌಂಟರ್ ಮಾಡಿ ಮುಗಿಸುವ ದುರುದ್ದೇಶವೂ ಸರಕಾರಕ್ಕಿತ್ತು.



ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ಬಿಜೆಪಿ ಮುಖಂಡರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸೋಮವಾರ ಭೇಟಿಯಾಗಿ ದೂರು ನೀಡಿದರು.

ಆದರೆ, ಪೊಲೀಸ್ ವ್ಯಾನ್‌ಗಳನ್ನು ಮಾಧ್ಯಮಗಳ ವಾಹನಗಳು ಹಿಂಬಾಲಿಸುತ್ತಿದ್ದ ಕಾರಣ ಸಫಲವಾಗಲಿಲ್ಲ ಎಂದು ಆರೋಪಿಸಿದರು.

→ 4

ಐಶ್ವರ್ಯಾ ಗೌಡ ವಿರುದ್ಧ ಡಿಕೆಸು ದೂರು ದಾಖಲು

ಬೆಂಗಳೂರು: ತಮ್ಮ ಹೆಸರು ದುರುಪಯೋಗ ಮಾಡಿಕೊಂಡು ವಂಚನೆ ಮಾಡಿದ ಆರೋಪದ ಹಿನ್ನೆಲೆ ಐಶ್ವರ್ಯಾ ಗೌಡ ವಿರುದ್ಧ ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ. ಐಶ್ವರ್ಯ ಗೌಡ ಎಂಬುವವರು ನನ್ನ ಹೆಸರು ದುರುಪಯೋಗ ಮಾಡಿಕೊಂಡು ಹಲವರಿಗೆ ಚಿನ್ನಾಭರಣ ಹಾಗೂ ಹಣ ವಂಚನೆ ಮಾಡಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗುತ್ತಿವೆ. ಹೀಗಾಗಿ, ನನ್ನ ಹೆಸರು ಬಳಸಿಕೊಂಡು ವಂಚನೆ ನಡೆಸಿರುವವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಜನರಿಗೆ ಇಂತಹ ಅನ್ಯಾಯ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭಾರತದ್ದೇ ಬಾಹ್ಯಾಕಾಶ ನಿಲ್ದಾಣ ಸ್ಥಾಪನೆಯತ್ತ ಹೆಜ್ಜೆ
ಮಹತ್ವಾಕಾಂಕ್ಷಿ ಸ್ಪೇಸ್ ಡಾಕಿಂಗ್ ಯೋಜನೆ ಯಶಸ್ವಿ
ಇಸ್ರೋ ಹೊಸ ಮೈಲಿಗಲ್ಲು

ಆಂಧ್ರಪ್ರದೇಶ: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ 'ಸ್ಪೇಸ್ ಡಾಕಿಂಗ್ ಎಕ್ಸ್ಪರಿಮೆಂಟ್' (ಸ್ಪಾಡೆಕ್)ನ್ನು ಸೋಮವಾರ ರಾತ್ರಿ 10 ಗಂಟೆಗೆ ಯಶಸ್ವಿಯಾಗಿ ಉಡಾವಣೆ ಮಾಡಿದೆ. ಈ ಮೂಲಕ ವರ್ಷದ ಕೊನೆಯಲ್ಲಿ ಇಸ್ರೋ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿದೆ.

ಕೆಳ ಕಕ್ಷೆಯಲ್ಲಿ ಎರಡು ಬಾಹ್ಯಾಕಾಶ ನೌಕೆಗಳ ಸಂಧಿಸುವಿಕೆಗೆ ಮತ್ತು ಬೇರ್ಪಡಿಸುವಿಕೆಗೆ ಅಗತ್ಯವಾದ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಈ ಪ್ರಾಯೋಗಿಕ ಉಡಾವಣೆ ನಡೆಯಲಿದೆ. ಇದು ಸಂಕೀರ್ಣ ಬಾಹ್ಯಾಕಾಶ ಕಾರ್ಯಾಚರಣೆಗಳಿಗೆ ನಿರ್ಣಾಯಕವಾದ ತಂತ್ರಜ್ಞಾನವಾಗಿದೆ. ದೊಡ್ಡ ಗಾತ್ರದ ಬಾಹ್ಯಾಕಾಶ ನೌಕೆಗಳಿಗೆ ಹೋಲಿಸಿದರೆ ಸಣ್ಣ ನೌಕೆಗಳನ್ನು ಸೇರಿಸುವುದು ಕ್ಲಿಷ್ಟಕರ ಕಾರ್ಯ ಎಂದು ಇಸ್ರೋ ಹೇಳಿದೆ. ಮುಂದಿನ ಚಂದ್ರಯಾನ-4 ಯೋಜನೆಗೆ ಈ ಪ್ರಯೋಗದ ಯಶಸ್ಸು ಮುಖ್ಯವಾದುದಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಏನಿದು ಯೋಜನೆ?: ಇಸ್ರೋದ ಸ್ಪೇಸ್ ಡಾಕಿಂಗ್ ಪ್ರಯೋಗ (ಸ್ಪೆಡೆಕ್ಸ್) ಎಂಬ ವಿನೂತನ ಪ್ರಯೋಗದಲ್ಲಿ ನಭಕ್ಕೆ ಚಿಮ್ಮುವ ರಾಕೆಟ್‌ನಿಂದ ನಿಗದಿತ ಕಕ್ಷೆಯನ್ನು ತಲುಪುವ ಎರಡು ಅವಳಿ ಉಪಗ್ರಹಗಳು ಮೊದಲು ದೂರವಾಗಿ, ನಂತರ ಕ್ರಮವಾಗಿ ಹತ್ತಿರ ಸೇರುತ್ತ, ಆನಂತರ ಒಂದೇ ಆಗಿ ಕಾರ್ಯಾಚರಣೆ ನಡೆಸುವ ಯೋಜನೆ ಇದಾಗಿದೆ. ಈ ಯೋಜನೆ ಯಶಸ್ವಿಯಾದರೆ, ಭಾರತದ್ದೇ ಆದ ಬಾಹ್ಯಾಕಾಶ ನಿಲ್ದಾಣ ಸ್ಥಾಪನೆಗೆ ಈ ಪ್ರಯೋಗ ದಾರಿ ಮಾಡಿಕೊಡಲಿದೆ. ಆ ಮೂಲಕ ಬಾಹ್ಯಾಕಾಶ ನಿಲ್ದಾಣ ಸ್ಥಾಪಿಸಿರುವ ಜಗತ್ತಿನ 4ನೇ ರಾಷ್ಟ್ರವಾಗಿ ಭಾರತ ಇತಿಹಾಸ ಸೇರಲಿದೆ.

ಭಾರತದ ಮಹಿಳೆಯರಲ್ಲಿದೆ 24 ಸಾವಿರ ಟನ್ ಚಿನ್ನ!

ವಿಶ್ವದ ಶೇಕಡಾ 11ರಷ್ಟು ಚಿನ್ನ ಭಾರತೀಯರ ಮನೆಗಳಲ್ಲಿದೆ: ವರ್ಲ್ಡ್ ಗೋಲ್ಡ್ ಕೌನ್ಸಿಲ್ ಮಾಹಿತಿ
ಅಮೆರಿಕ, ಜರ್ಮನಿ, ಇಟಲಿ, ಫ್ರಾನ್ಸ್, ರಷ್ಯಾಗಳ ಒಟ್ಟು ಚಿನ್ನದ ಮೀಸಲಿಗಿಂತ ಹೆಚ್ಚು ಚಿನ್ನ ಭಾರತದಲ್ಲಿ

ಬೆಂಗಳೂರು: ಭಾರತೀಯರ ಪಾಲಿಗೆ ಚಿನ್ನ ಬದುಕಿನ ಭಾಗ. ಬಡವರಿರಲಿ, ಶ್ರೀಮಂತರಿರಲಿ ಮದುವೆ ಮುಂತಾದ ಶುಭ ಸಂದರ್ಭಗಳಲ್ಲಿ ಚಿನ್ನ ಧರಿಸದವರಿಲ್ಲ. ಒಂದು ಗ್ರಾಂ ಚಿನ್ನವಾದರೂ ಪೆಟ್ಟಿಗೆಯಲ್ಲಿಟ್ಟು ಕಾಪಿಡದ ಮನೆಗಳು ವಿರಳಾತಿ ವಿರಳ. ಇದು ಕೇವಲ ಶ್ರೀಮಂತಿಕೆಯ ಸಂಕೇತವಲ್ಲ, ದೇಶವಾಸಿಗಳ ಸಂಪ್ರದಾಯ, ಸಾಂಸ್ಕೃತಿಕ ಮೌಲ್ಯದಲ್ಲಿ ಚಿನ್ನಕ್ಕೆ ಮಹತ್ವದ ಸ್ಥಾನವಿದೆ.

ಇದೀಗ ಭಾರತದ ಮಹಿಳೆಯರ ಚಿನ್ನದ ದಾಸ್ತಾನಿನ ಬಗ್ಗೆ ಸ್ವತಃ ವರ್ಲ್ಡ್ ಗೋಲ್ಡ್ ಕೌನ್ಸಿಲ್ ಅಚ್ಚರಿ ವ್ಯಕ್ತಪಡಿಸಿದೆ. ಭಾರತದ ಮಹಿಳೆಯರಲ್ಲಿ ಕನಿಷ್ಠವೆಂದರೂ 24 ಸಾವಿರ ಟನ್ ಚಿನ್ನವಿದೆ. ಚಿನ್ನದ ಮಾಲೀಕತ್ವದಲ್ಲಿ ಇಂದು ಭಾರತವೇ ಜಾಗತಿಕ ನಾಯಕ ಎನಿಸಿದೆ. ವಿಶ್ವದ ಯಾವುದೇ ದೇಶಕ್ಕಿಂತ ಹೆಚ್ಚಿನ ಚಿನ್ನದ ನಿಧಿ (ಗೋಲ್ಡ್ ರಿಸರ್ವ್) ಭಾರತದ ಮಹಿಳೆಯರ ಬಳಿ ಇದೆ. ಇದು ಆಭರಣದ ಮಾದರಿಯಲ್ಲಿರುವ ಚಿನ್ನದ ಪೈಕಿ ವಿಶ್ವದ ಶೇ. 11ರಷ್ಟು ಎಂದು ಡಬ್ಲ್ಯುಜಿಸಿ ತಿಳಿಸಿದೆ.

ದಕ್ಷಿಣದಲ್ಲೇ ಹೆಚ್ಚು

ಭಾರತದಲ್ಲಿ ಚಿನ್ನ ಹೊಂದಿರುವವರ ಪೈಕಿ ದಕ್ಷಿಣ ಭಾರತದ ಮಹಿಳೆಯರೇ ಮುಂಚೂಣಿಯಲ್ಲಿದ್ದಾರೆ. ಭಾರತದ ಒಟ್ಟಾರೆ ಚಿನ್ನದಲ್ಲಿ ಶೇ.40ರಷ್ಟು ಚಿನ್ನ ದಕ್ಷಿಣ ಭಾರತದಲ್ಲಿದೆ. ಈ ಪೈಕಿ ತಮಿಳುನಾಡು ರಾಜ್ಯವೊಂದರಲ್ಲೇ ಶೇ.28ರಷ್ಟು ಚಿನ್ನವಿದೆ. ಕೇರಳ, ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳಲ್ಲೂ ಮಹಿಳೆಯರಲ್ಲಿ ಚಿನ್ನದ ಬಗ್ಗೆ ವಿಪರೀತ ವ್ಯಾಮೋಹವಿದೆ. ಭಾರತದ ಆರ್ಥಿಕತೆಗೆ ಈ ಚಿನ್ನದ ಮೀಸಲು ಕೂಡ ಅಪಾರ ಕೊಡುಗೆ ನೀಡಿದೆ. ದೇಶದ ಜಿಡಿಪಿಗೆ ಹೋಲಿಸಿದರೆ ಶೇ.40ರಷ್ಟಾಗುತ್ತದೆ. ಈ ಮಾನದಂಡದಿಂದ ಅಳೆದರೆ ಭಾರತ ವಿಶ್ವದ ಅತಿ ಶ್ರೀಮಂತ ರಾಷ್ಟ್ರ ಎನಿಸಿಕೊಳ್ಳಲಿದೆ.

ಭಾರತೀಯರ ಕೈಯಲ್ಲಿರುವ ಆಭರಣ ಚಿನ್ನದ ಸಂಗ್ರಹ, ಅಮೆರಿಕ, ರಷ್ಯಾ ಸೇರಿದಂತೆ ವಿಶ್ವದ ಪ್ರಮುಖ 5 ರಾಷ್ಟ್ರಗಳ ಒಟ್ಟು ಚಿನ್ನದ ಮೀಸಲಿಗಿಂತ ಹೆಚ್ಚಾಗಿದೆ. ಪ್ರಸ್ತುತ, ಅಮೆರಿಕ 8 ಸಾವಿರ ಟನ್ ಚಿನ್ನದ ದಾಸ್ತಾನು ಹೊಂದಿದ್ದರೆ, 2ನೇ ಸ್ಥಾನದಲ್ಲಿರುವ ಜರ್ಮನಿ ಬಳಿ 3300 ಟನ್ ಚಿನ್ನವಿದೆ. ಇಟಲಿ ಬಳಿ 2450 ಟನ್ ಚಿನ್ನವಿದ್ದರೆ, ಫ್ರಾನ್ಸ್ ದೇಶದ ಬಳಿ 2400 ಟನ್ ಹಾಗೂ ರಷ್ಯಾದ ಬಳಿ 1900 ಟನ್ ಚಿನ್ನದ ರಿಸರ್ವ್ ಇದೆ. ಈ ಐದೂ ದೇಶಗಳ ಚಿನ್ನದ ದಾಸ್ತಾನನ್ನು ಒಟ್ಟುಗೂಡಿಸಿದರೂ ಸಹ, ಭಾರತದ ಮಹಿಳೆಯರ ಬಳಿ ಇರುವ ಚಿನ್ನಕ್ಕೆ ಸರಿಸಮವಾಗುವುದಿಲ್ಲ ಎಂದು ಡಬ್ಲ್ಯುಜಿಸಿ ತಿಳಿಸಿದೆ.

ಆಕ್ಸ್‌ಫರ್ಡ್ ಗೋಲ್ಡ್ ಗ್ರೂಪ್ ಪ್ರಕಾರ, ಭಾರತದ ಮನೆಗಳಲ್ಲಿ ಇರುವ ಚಿನ್ನದ ಪ್ರಮಾಣ ವಿಶ್ವದ ಶೇ. 11ರಷ್ಟಾಗಿದೆ. ಇದು ಅಮೆರಿಕ, ಅಂತಾರಾಷ್ಟ್ರೀಯ ಹಣಕಾಸು ನಿಧಿ, ಸ್ವಿಜರ್ಲೆಂಡ್ ಹಾಗೂ ಜರ್ಮನಿ ದೇಶದ ಬಳಿ ಇರುವ ಚಿನ್ನದ ಮೀಸಲು ಪ್ರಮಾಣಕ್ಕಿಂತ ಭಾರೀ ಪ್ರಮಾಣದಲ್ಲಿ ಹೆಚ್ಚು

ಏನಿದೆ ನಿಯಮ: ಭಾರತದ ಆದಾಯ ತೆರಿಗೆ ಇಲಾಖೆಯ ನಿಯಮದ ಪ್ರಕಾರ, ವಿವಾಹಿತ ಮಹಿಳೆ ತನ್ನ ಬಳಿ 500 ಗ್ರಾಂ ಅಂದರೆ ಅರ್ಧ ಕಿಲೋ ಚಿನ್ನವನ್ನು ಹೊಂದಿರಲು ಅವಕಾಶವಿದೆ. ಅವಿವಾಹಿತ ಮಹಿಳೆ 250 ಗ್ರಾಂ ಚಿನ್ನವನ್ನು ತನ್ನ ಬಳಿ ಹೊಂದಿರಬಹುದು. ಆದರೆ, ಭಾರತದಲ್ಲಿ ಪುರುಷರು ಕೇವಲ 100 ಗ್ರಾಂ ಚಿನ್ನವನ್ನು ಮಾತ್ರವೇ ಹೊಂದಬಹುದು.

ಫನ್‌ತರಂಗ
- ರಘುಪತಿ ಶೃಂಗೇರಿ -

ಜನವರಿ 5ಕ್ಕೆ ರಾಜ್ಯಮಟ್ಟದ ಯುವಜನೋತ್ಸವ, ಊಟಕ್ಕೆ 'ಮಾಂಸಾಹಾರ'
ಸುದ್ದಿ

ಈಗೀಗ ಯಾವುದೇ ಸಮ್ಮೇಳನ, ಉತ್ಸವಗಳು ನಡೆಯೋ ಮೊದ್ಲು ಅಡುಗೆಯವರ 'ಡೇಟ್ ಫಿಕ್ಸ್' ಮಾಡ್ಕೊಳ್ಬೇಕು...!

ಸಮಾಚಾರ ಸಣ್ಣದಲ್ಲ

ಅಂಗನವಾಡಿ ಹುದ್ದೆಗೆ ಜ.5ರವರೆಗೆ ಅವಕಾಶ

ಹುಣಸೂರು: ಶಿಶು ಅಭಿವೃದ್ಧಿ ಯೋಜನೆಯಡಿ ಖಾಲಿ ಇದ್ದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ಸಿಡಿಪಿಒ ಹರೀಶ್ ತಿಳಿಸಿದ್ದಾರೆ. ಶಿಶು ಅಭಿವೃದ್ಧಿ ಯೋಜನೆಯಡಿ ಆನ್‌ಲೈನ್ ಅರ್ಜಿ ಸಲ್ಲಿಸುವಾಗ 04 ಹಂತಗಳನ್ನು ಪೂರ್ಣಗೊಳಿಸಲು ಜ.5ರವರೆಗೆ ಅವಕಾಶ ನೀಡಲಾಗಿದೆ. ಇದಕ್ಕೆ ಸಂಬಂಧಪಟ್ಟವರು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದ್ದಾರೆ.

ಸೆಸ್ಕ್ ವಿದ್ಯುತ್‌ಗ್ರಾಹಕರ ಕುಂದುಕೊರತೆ ಸಭೆ

ತಿ. ನರಸೀಪುರ: ನಂಜನಗೂಡು ಉಪ ವಿಭಾಗದ ವತಿಯಿಂದ ತಿ. ನರಸೀಪುರ, ಬನ್ನೂರು ಉಪವಿಭಾಗಗಳ ವಿದ್ಯುತ್ ಗ್ರಾಹಕರ ಕುಂದುಕೊರತೆ ಸಭೆ ಡಿ. 31ರಂದು ಹಮ್ಮಿಕೊಳ್ಳಲಾಗಿದೆ. ಸೆಸ್ಕ್ ನಂಜನಗೂಡು ಕಾರ್ಯ ನಿರ್ವಾಹಕ ಅಭಿಯಂತರ ಅಧ್ಯಕ್ಷತೆಯಲ್ಲಿ ಬೆಳಗ್ಗೆ 10ರಿಂದ 1ರವರೆಗೆ ಸಭೆ ನಡೆಯಲಿದ್ದು, ಉಪ ವಿಭಾಗದ ಬೈರಾಪುರ, ಕಿರಗಸೂರು ಗರ್ಗೇಶ್ವರಿ, ಹೊಸಕೋಟೆ, ತುಂಬಲ, ಮೂಗೂರು,ವಾಟಾಳು, ಕೊತ್ತೇಗಾಲ, ಆಲಗೂಡು, ಕರೋಹಟ್ಟಿ, ಮಾದಾಪುರ, ಹೆಮ್ಮಿಗೆ, ದೊಡ್ಡಪುರ, ಕಲಿಯೂರು, ತಲಕಾಡು,ಬಿ. ಸೀಹಳ್ಳಿ, ಹೊಳೆಸಾಲು, ಬೆನಕನಹಳ್ಳಿ ದೊಡ್ಡೇಬಾಗಿಲು, ಕೊಳತ್ತೂರು, ಮುತ್ತಲವಾಡಿ, ಸೋಮನಾಥಪುರ, ಸೋಸಲೆ, ಉಕ್ಕಲಗೆರೆ, ಶೆಟ್ಟಹಳ್ಳಿ ಗ್ರಾಮಗಳ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಚರ್ಚಿಸಬಹುದು. ಮಧ್ಯಾಹ್ನ 2ರಿಂದ 4 ಗಂಟೆ ವರೆಗೆ ಬನ್ನೂರಿನ ಸೆಸ್ಕ್ ಕಚೇರಿಯಲ್ಲಿ ಬನ್ನೂರು ಉಪ ವಿಭಾಗಕ್ಕೆ ಸೇರಿದ ಬನ್ನೂರು, ಅತ್ತಹಳ್ಳಿ, ಕೇತುಪುರ, ರಂಗಸಮುದ್ರ, ಬೀಡನಹಳ್ಳಿ, ಹನುಮನಾಳು, ಕೊಡಗಹಳ್ಳಿ, ಹೆಗ್ಗೂರು, ಬಿ. ಸೀಹಳ್ಳಿ, ಮಲಿಯೂರು, ತುರುಗನೂರು, ಅಂಕನಹಳ್ಳಿ, ಚಿದರಹಳ್ಳಿ, ಚಾಮನಹಳ್ಳಿ, ಮಾಕನಹಳ್ಳಿ ಗ್ರಾಮಗಳ ವಿದ್ಯುತ್ ಗ್ರಾಹಕರ ಕುಂದುಕೊರತೆ ಸಭೆ ಇದೆ.

ಬೃಹತ್ ಕೇಕ್ ಮೇಳಕ್ಕೆ ಚಾಲನೆ

ಮಂಡ್ಯ: ಜನರ ಅಭಿರುಚಿಗೆ ತಕ್ಕಂತೆ ಕೇಕ್‌ಗಳ ಮುಕ್ತ ಪ್ರದರ್ಶನ ಮಾರಾಟ ಮೇಳ ಆಯೋಜಿಸಿದ್ದೇವೆ ಎಂದು ಬೇಕ್ ಪಾಯಿಂಟ್ ಮಾಲೀಕ ಎಚ್.ಆರ್.ಅರವಿಂದ್ ಹೇಳಿದರು. ನಗರದ ಚಾಮುಂಡೇಶ್ವರಿ ಬಡಾವಣೆ ಬೇಕ್‌ಪಾಯಿಂಟ್ ಆವರಣದಲ್ಲಿ 2025ರ ಹೊಸ ವರ್ಷ ಆಚರಣೆ ಕೇಕ್‌ಗಳ ಮುಕ್ತ ಪ್ರದರ್ಶನ ಮಾರಾಟ ಮೇಳದಲ್ಲಿ ಮಾತನಾಡಿದರು. ಕೇಕ್‌ಮೇಳಕ್ಕೆ ನಗರ ಸಭಾ ಅಧ್ಯಕ್ಷ ನಾಗೇಶ್ ಚಾಲನೆ ನೀಡಿದರು. ರಕ್ತದಾನಿ ಜೀವಧಾರೆ ನಟರಾಜ್‌ಗೆ ಅಭಿನಂದಿಸಿದರು. 25 ವರ್ಷದಿಂದ ಗ್ರಾಹಕರಿಗೆ ಗುಣಮಟ್ಟದ ಬೇಕರಿ ಪದಾರ್ಥಗಳನ್ನು ನೀಡುತ್ತಿದ್ದೇವೆ. ಜತೆಗೆ 15 ವರ್ಷಗಳಿಂದ ಕೇಕ್‌ಮೇಳ ಕೂಡ ನಡೆಯುತ್ತಿದೆ. ಪ್ರತಿವರ್ಷ ಡಿ.30, ಜ.1ರಂದು ಯುವಸಮುದಾಯದ ಅಭಿರುಚಿಗೆ ತಕ್ಕ ಕೇಕ್ ಪ್ರದರ್ಶನಗೊಳ್ಳುತ್ತಿವೆ ಎಂದರು. ನಗರಸಭಾ ಉಪಾಧ್ಯಕ್ಷ ಅರುಣ್‌ಕುಮಾರ್, ಮುಡಾ ಅಧ್ಯಕ್ಷ ನಹೀಂ, ಬಿಜೆಪಿ ಮುಖಂಡ ವಸಂತಕುಮಾರ್, ಚಲನಚಿತ್ರನಾಯಕ ನಟ ಸೂರ್ಯ, ಚನ್ನಪ್ಪ, ಮೈತ್ರಿ ಮತ್ತಿತರರಿದ್ದರು.

ಗೆಳೆಯರ ಬಳಗದಿಂದ ವಿಷ್ಣು ಪುಣ್ಯ ಸ್ಮರಣೆ

ಚಾಮರಾಜನಗರ: ನಗರದ ಹಳೇ ಖಾಸಗಿ ಬಸ್ ನಿಲ್ದಾಣದಲ್ಲಿ ಡಾ. ವಿಷ್ಣು ಸೇನಾ ಗೆಳೆಯರ ಬಳಗದಿಂದ ಸಾಹಸ ಸಿಂಹ ಡಾ. ವಿಷ್ಣುವರ್ಧನ್ ಅವರ 15 ವರ್ಷದ ಪುಣ್ಯ ಸ್ಮರಣೆ, 2025ನೇ ವರ್ಷದ ನೂತನ ಕ್ಯಾಲೆಂಡರ್ ಬಿಡುಗಡೆ, ಅನ್ನ ಸಂತರ್ಪಣೆ, ದಿನಪೂರ್ತಿ ವಿಷ್ಣುವರ್ಧನ್ ನಟನೆಯ ಚಲನಚಿತ್ರ, ಗೀತೆಗಳನ್ನು ಹಾಕಿ ನುಡಿನಮನ ಸಲ್ಲಿಸಿದರು. ನಗರದ ಮಾರಮ್ಮನ ದೇವಸ್ಥಾನದ ಮುಂಭಾಗ ಶಾಮಿಯಾನ ಹಾಕಿ ವಿಷ್ಣು ಫೋಟೋಗೆ ದೊಡ್ಡಗಾತ್ರದ ಹೂವಿನ ಹಾರ ಹಾಕಿ, ವಿಷ್ಣು ಪರ ಜಯಕಾರ ಕೂಗಿದರು. ವಿಷ್ಣುವರ್ಧನ ಭಾವಚಿತ್ರದ 2025ರ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು. ನಂತರ ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ಮಾಡಲಾಯಿತು. ಗೆಳೆಯರ ಬಳಗದ ರಾಜೇಂದ್ರ, ಸ್ವೀಟ್ ಮಹೇಶ್, ಜಗ್ಗಿ, ಗದಾ ಇದ್ದರು.

ಗ್ಯಾರಂಟಿಗಳ ಅರ್ಹರಿಗೆ ತಲುಪಿಸಿ

ಜಿಲ್ಲಾ ಗ್ಯಾರಂಟಿಗಳ ಪ್ರಾಧಿಕಾರದ ಸಭೆ | ಅಧ್ಯಕ್ಷ ಅರುಣ್ ಕುಮಾರ್ ಸೂಚನೆ

ಮೈಸೂರು: ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿಗಳನ್ನು ಎಲ್ಲಾ ಅರ್ಹ ಫಲಾನುಭವಿಗಳಿಗೆ ತಲುಪಿಸಲು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಗ್ಯಾರಂಟಿಗಳ ಪ್ರಾಧಿಕಾರದ ಅಧ್ಯಕ್ಷ ಎಸ್.ಅರುಣ್ ಕುಮಾರ್ ಅಧಿಕಾರಿಗಳಿಗೆ ನಿರ್ದೇಶಿಸಿದರು.

ನಗರದ ಜಿಪಂ ಡಿ. ದೇವರಾಜು ಅರಸು ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಗ್ಯಾರಂಟಿ ಯೋಜನೆಗಳು ರಾಜ್ಯದ ಎಲ್ಲಾ ಅರ್ಹರಿಗೂ ತಲುಪಬೇಕು. ಅಧಿಕಾರಿಗಳನ್ನು ವಿಶ್ವಾಸಕ್ಕೆ ಪಡೆದು ಯೋಜನೆ ಪರಿಣಾಮಕಾರಿ ಜಾರಿ ಮಾಡಬೇಕು ಎಂದು ಗ್ಯಾರಂಟಿ ಸಮಿತಿ ಸದಸ್ಯರಿಗೆ ತಿಳಿಸಿದರು. ಜನ ಗ್ಯಾರಂಟಿಗಳಿಗೆ ಅರ್ಜಿ ಸಲ್ಲಿಸಲು ತಾಂತ್ರಿಕ ತೊಡಕುಗಳನ್ನು ಎದುರಿಸುತ್ತಿದ್ದು, ಅಧಿಕಾರಿಗಳು ಗಮನಹರಿಸಿ ಸಮಸ್ಯೆ ಪರಿಹರಿಸುವಂತೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಿಇಒ ಗಾಯತ್ರಿ ಮಾತನಾಡಿ, ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ತಲುಪಿಸುವ ಕೆಲಸ ಮಾಡಬೇಕು. ಫಲಾನುಭವಿಗಳಿಗೆ ಸಮಸ್ಯೆ ಉಂಟಾದರೆ ಅಧಿಕಾರಿಗಳು ಬಗೆಹರಿಸಬೇಕು. ಯಾವ ಫಲಾನುಭವಿಯೂ ಹೊರಗೆ ಉಳಿಯದಂತೆ ಅಧಿಕಾರಿಗಳು ಕೆಲಸ ನಿರ್ವಹಿಸಬೇಕು. ಸಾಮಾನ್ಯ ಸಭೆಗಳನ್ನು ನಡೆಸಿ, ತಳಮಟ್ಟದ ಲೋಪ ಸರಿಪಡಿಸಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಸಭೆಯಲ್ಲಿ ಯುವನಿಧಿ ಪೋಸ್ಟರ್ ಬಿಡುಗಡೆ ಮಾಡಲಾಯಿತು.

52,789 ಲಕ್ಷ ಆದಾಯ: ಶಕ್ತಿ ಯೋಜನೆಯಡಿ ಈವರೆಗೆ ಜಿಲ್ಲೆಯಲ್ಲಿ ಶೇ. 65.91 ರಷ್ಟು ಮಹಿಳೆಯರು ಬಸ್‌ನಲ್ಲಿ ಉಚಿತ ಪ್ರಯಾಣಿಸಿದ್ದು, ಒಟ್ಟು 52,789 ಲಕ್ಷ ರೂ. ಸಾರಿಗೆ ಸಂಸ್ಥೆಗೆ ಆದಾಯ ಸಂದಿದೆ ಎಂದು ತಿಳಿಸಿದರು.

7453 ಮಂದಿ: ಯುವನಿಧಿ ಯೋಜನೆಯಡಿ 2023 ಹಾಗೂ 2024 ಶೈಕ್ಷಣಿಕ ವರ್ಷದಲ್ಲಿ ನಿರುದ್ಯೋಗಿಗಳು ನೋಂದಣಿ ಆಗಬಹುದಾಗಿದ್ದು, ಪ್ರತಿ ತಿಂಗಳು ಸ್ವಯಂ ಘೋಷಣೆ ಕಡ್ಡಾಯ. ಜಿಲ್ಲೆಯಲ್ಲಿ ಒಟ್ಟು 7453 ಡಿಪ್ಲೊಮಾ, ಪದವೀಧರರು ನೋಂದಣಿ ಆಗಿದ್ದಾರೆ. ಬಾಕಿ ಇರುವ ಅರ್ಹರನ್ನು ನೋಂದಾಯಿಸಲು ತಿಳಿಸಿದರು. ಈ ವೇಳೆ ಯುವನಿಧಿ ಪೋಸ್ಟರ್ ಮತ್ತು ಬ್ಯಾನರ್ ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಗ್ಯಾರಂಟಿ ಸಮಿತಿ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

ಶಾ ರಾಜೀನಾಮೆ ನೀಡಲಿ:ಬಿಎಸ್ಪಿ

ಮಂಡ್ಯ: ಪ್ರಸ್ತುತ ದಿನಗಳಲ್ಲೂ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಅಪಮಾನವಾಗುವ ಹೇಳಿಕೆ ನೀಡಿರುವ ಬಿಜೆಪಿ ಕೇಂದ್ರ ಗೃಹ ಸಚಿವ ಅಮೀದ್ ಶಾ ಕೂಡಲೇ ರಾಜೀನಾಮೆ ನೀಡಿ ದೇಶ ಜನತೆಯ ಕ್ಷೇಮೆಯಾಚಿಸಲಿ ಎಂದು ಬಿಎಸ್ಪಿ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ಎಚ್ಚರಿಸಿದರು.

ಪತ್ರಿಕಾ ಸಭಾಂಗಣದಲ್ಲಿ ಬಹುಜನ ಸಮಾಜ ಪಕ್ಷ ಜಿಲ್ಲಾ ಸಮಿತಿ ಪದಾಧಿಕಾರಿಗಳ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಂಸತ್ ನಲ್ಲಿ ಚರ್ಚಿಸುವ ವೇಳೆ ದೇಶದ್ರೋಹದ ಹೇಳಿಕೆ ನೀಡಿರುವುದು ಖಂಡನೀಯ ಎಂದು ನುಡಿದರು. ಶಾರನ್ನು ಕೂಡಲೇ ಸಚಿವ ಸಂಪುಟದಿಂದ ವಜಾ ಮಾಡಬೇಕಿತ್ತು, ಪ್ರಧಾನಮಂತ್ರಿ ನರೇಂದ್ರಮೋದಿ ಮೌನವಾಗಿರುವುದು ನಾಚಿಗೆಗೇಡಿನ ಸಂಗತಿ ಎಂದು ಹೇಳಿದರು. ಪಕ್ಷದ ರಾಜ್ಯ ಉಸ್ತುವಾರಿಗಳಾದ ಗಂಗಾಧರ್ ಬಹುಜನ್, ಡಾ. ಹ.ರಾ. ಮಹೇಶ್, ವೆಂಕಟೇಶ್, ಜಿಲ್ಲಾಧ್ಯಕ್ಷ ಶಿವಶಂಕರ್, ಮಹದೇವು, ಜಿಲ್ಲಾ ಉಸ್ತುವಾರಿ ಚಲುವರಾಜು, ಉಪಾಧ್ಯಕ್ಷ ಕುಮಾರ್, ಆನಂದ್, ವೀರಭದ್ರಯ್ಯ ಇದ್ದರು.

ಗ್ರಾಪಂ ಸೇವೆಗೆ ಕಂಪ್ಯೂಟರ್ ಆಪರೇಟರ್‌ಗಳ ಕೊಡುಗೆ

ತಾಪಂ ಸಭಾಂಗಣದಲ್ಲಿ ಕಂಪ್ಯೂ ಟರ್ ಆಪರೇಟರ್ ದಿನಾಚರಣೆ ನಡೆಯಿತು.

ಪಿರಿಯಾಪಟ್ಟಣ: ಗ್ರಾಮ ಪಂಚಾಯಿತಿಗಳು ನೀಡುತ್ತಿರುವ ಯಶಸ್ವಿ ಸೇವೆಗೆ ಕಂಪ್ಯೂಟರ್ ಆಪರೇಟರ್‌ಗಳ ಕೊಡುಗೆ ಅಪಾರ ಎಂದು ಜಿಲ್ಲಾ ಪಂಚಾಯಿತಿ ನರೇಗಾ ಯೋಜನೆಯ ಉಪ ನಿರ್ದೇಶಕ ಕರುಣಾಕರ್ ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಂಪ್ಯೂಟರ್ ಆಪರೇಟರ್ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಂಪ್ಯೂಟರ್ ಪಿತಾಮಹ ಬ್ಯಾಬೇಜ್ ರವರ ಜನ್ಮ ದಿನವನ್ನು ಸರಕಾರಗ್ರಾಪಂ ಕಂಪ್ಯೂಟರ್ ಆಪರೇಟರ್‌ಗಳ ದಿನವೆಂದು ಆಚರಣೆ ಮಾಡುತ್ತಿದೆ. ನರೇಗಾ, ಸಕಾಲ, ಪಂಚತಂತ್ರ, ಸ್ವಚ್ಛ ಭಾರತ್ ಮಿಷನ್, ಜನನ ಮರಣ ಪ್ರಮಾಣ ಪತ್ರ, ಗ್ರಾಮ ಸ್ವರಾಜ್ ಹಾಗೂ 15ನೇ ಹಣಕಾಸು, ಇತರ ಗರಿಷ್ಠ ಸೇವೆಗಳ ಹಿಂದೆ ನಿಮ್ಮ ಪರಿಶ್ರಮವಿದೆ. ಕೆಲವೊಮ್ಮೆ ಕರ್ತವ್ಯದ ಅವಧಿ ಮೀರಿ ಸೇವೆ ಸಲ್ಲಿಸಿದ್ದನ್ನು ಸರಕಾರ ಗುರುತಿಸಿರುವುದು ಉತ್ತಮ ಬೆಳವಣಿಗೆ ಎಂದು ತಿಳಿಸಿದರು.

ಗ್ರಾಪಂ ಕಂಪ್ಯೂಟರ್ ಆಪರೇಟರ್‌ಗಳಾದ ಮಾಕೋಡು ಕುಮಾರ್, ಶಿವಣ್ಣ, ಶುಭಾ, ತಾಪಂ ಕಂಪ್ಯೂಟರ್ ಆಪರೇಟರ್ ನವೀನ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು. ಪ್ರದೀಪ್, ವಿಶ್ವನಾಥ್, ಸುಸ್ಮಿತಾ , ಸಂತೋಷ್, ರವಿ ಇದ್ದರು.

ಒಕ್ಕಲಿಗರ ಕಟ್ಟಡಕ್ಕೆ 25 ಲಕ್ಷ ಅನುದಾನ: ಮಂಜೇಗೌಡ

ಚಾಮರಾಜನಗರ: ನಗರದ ಹೊರವಲಯದಲ್ಲಿ ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ವೈಯುಕ್ತಿಕವಾಗಿ ಖರೀದಿಸಿ ತಾಲೂಕು ಒಕ್ಕಲಿಗರ ಸಂಘಕ್ಕೆ ನೀಡಿರುವ ನಿವೇಶನದಲ್ಲಿ ಕಟ್ಟಡ ನಿರ್ಮಿಸಲು ತಮ್ಮ ಅನುದಾನದಲ್ಲಿ 25 ಲಕ್ಷ ರೂ. ನೀಡುವುದಾಗಿ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಭರವಸೆ ನೀಡಿದರು.

ನಗರದ ಒಕ್ಕಲಿಗರ ಸಮುದಾಯ ಭವನದಲ್ಲಿ ಒಕ್ಕಲಿಗರ ಸಂಘದ ವತಿಯಿಂದ ಕುವೆಂಪುರವರ ಜನ್ಮದಿನಾಚರಣೆ ಕಾರ್ಯಕ್ರಮ ಹಾಗೂ ಕ್ಯಾಲೆಂಡರ್ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಒಕ್ಕಲಿಗ ಸಮುದಾಯ ಕೊಡುಗೈ ಸಮಾಜವಾಗಿದೆ. ಬೆಂಗಳೂರು ನಿರ್ಮಾತೃ ಕೆಂಪೇಗೌಡರು, ರಾಷ್ಟ್ರಕವಿ ಕುವೆಂಪು ಅವರು ನಮ್ಮ ಸಮುದಾಯದ ಮಹಾನ್ ಚೇತನರಾಗಿದ್ದು, ನಾಡಿಗೆ ಉತ್ತಮ ಸೇವೆ ನೀಡಿದ್ದಾರೆ ಎಂದರು. ಒಕ್ಕಲಿಗರ ಸಂಘದ ಗೌರವ ಅಧ್ಯಕ್ಷ ಕೆ.ಪುಟ್ಟಸ್ವಾಮಿಗೌಡ ಮಾತನಾಡಿ ಕುವೆಂಪು ಅವರು ದೊಡ್ಡ ವ್ಯಕ್ತಿಗಳಾಗಿ ಬೆಳೆದು ಈ ನಾಡಿಗೆ ತಮ್ಮಯಾದ ಕೊಡುಗೆ ನೀಡಿದ್ದಾರೆ ಎಂದರು.

ಒಕ್ಕಲಿಗರ ಸಂಘದ ಸುದರ್ಶನ್ ಗೌಡ, ಕುವೆಂಪು ಕನ್ನಡಕ್ಕೆ ಮೊದಲ ಜ್ಞಾನಪೀಠ ಪ್ರಶಸ್ತಿಯನ್ನೂ, ಎರಡನೆ ರಾಷ್ಟ್ರಕವಿಯಾಗಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ತಂದುಕೊಟ್ಟವರು ಎಂದರು.

ಕರ್ನಾಟಕ ಸೇನಾ ಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರನ್ನು ಸನ್ಮಾನಿಸಲಾಯಿತು. ಕೋಶಾಧ್ಯಕ್ಷ ಜಿ.ನಾರಾಯಣಪ್ರಸಾದ್, ಉಪಾಧ್ಯಕ್ಷರಾದ ಚಿನ್ನುಮುತ್ತು, ಪಿ.ಕೆ.ರಾಜು, ಕೆ.ಎಂ.ಮಂಜು,ಆರ್. ಸೋಮಶೇಖರ್, ಸಹ ಕಾರ್ಯದರ್ಶಿ ನಾಗೇಂದ್ರ ಗೌಡ, ನಿರ್ದೇಶಕರಾದ ಮರಿಸ್ವಾಮಿಗೌಡ, ಮಹೇಶ್ ಗೌಡ, ಚಿಕ್ಕತಾಯಮ್ಮ, ಮಣಿ ಮಾಸ್ಟರ್, ಶೇಖರ್ ಹೊಮ್ಮ, ಅರುಣ್ ಕುಮಾರ್ ಹಾಜರಿದ್ದರು.

ಗೌಡರ ಅವಹೇಳನ: ಹೋರಾಟ

ಪಿರಿಯಾಪಟ್ಟಣ: ಕೊಡಗು ಗೌಡರ ಬಗ್ಗೆ ಅವಹೇಳನಕಾರಿ ಹೇಳಿಕೆ ನಿಲ್ಲಿಸದಿದ್ದರೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಕೊಡಗು ಗೌಡ ಸಮಾಜ ಫೆಡರೇಷನ್ ನಿರ್ದೇಶಕ ಕುಯ್ಯುಮುಡಿ ಅಶ್ವಿನಿಕುಮಾರ್ ಎಚ್ಚರಿಕೆ ನೀಡಿದರು.

ಪತ್ರಕರ್ತರ ಸಂಘದಲ್ಲಿ ನಡೆದಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕೊಡಗು ಜಿಲ್ಲೆಯ ಮರಗೋಡುಗ್ರಾಮದ ಕಟ್ಟೆಮಾಡು ಎಂಬಲ್ಲಿ ಎಲ್ಲಾರು ಸೇರಿ ಮೃತ್ಯುಂಜಯ ಮಹದೇಶ್ವರ ದೇವಾಲಯ ನಿರ್ಮಿಸಿದೆ. ಈ ದೇವಾಲಯಕ್ಕೆ ಸರಳ ಪಂಚೆ ಧರಿಸಿ ಎಲ್ಲರೂ ಒಂದೇ ಎಂಬ ಭಾವನೆಯಿಂದ ಆಗಮಿಸುವಂತೆ ದೇವಾಲಯದ ಟ್ರಸ್ಟ್ ತೀರ್ಮಾನ ಮಾಡಿದೆ. ಆದಾಗಿಯೂ ಕೆಲವರು ಕೊಡವರ ಉಡುಪು ಧರಿಸಿ ಭಾಗವಹಿಸಿದ್ದನ್ನು ಕೊಡವ ಸದಸ್ಯರ ಟ್ರಸ್ಟ್ ವಿರೋಧಿಸಿದೆ. ಈ ಘಟನೆಗೆ ಸಂಬಂಧಿಸಿದಂತೆ ಕೊಡವ ಮುಖಂಡ ನಾಚಪ್ಪ ಸಾಮಾಜಿಕ ಜಾಲತಾಣಗಳಲ್ಲಿ ಕೊಡಗು ಗೌಡರನ್ನು ಕೆನ್ನಾಯಿಗಳಿಗೆ ಹೋಲಿಸಿ ಅವಮಾನ ಮಾಡಿದ್ದಾರೆ.

ಅಲ್ಲದೆ ಮೂಲ ಕೊಡಗಿನವರು ನಾವೇ ಇವರು ಹೊಗಿನಿಂದ ಬಂದವರು ಎಂದು ಹೇಳಿದ್ದಾರೆ. ಇದನ್ನು ಪಿರಿಯಾಪಟ್ಟಣ ತಾಲೂಕು ಕೊಡಗುಗೌಡ ಸಮಾಜ ಖಂಡಿಸುತ್ತದೆ. ಇದು ಹೀಗೆ ಮುಂದುವರೆದರೆ ನಾಚಪ್ಪ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡುತ್ತಿದ್ದೇವೆ ಎಂದು ತಿಳಿಸಿದರು.

ಕೊಡಗು ಗೌಡ ಸಮಾಜದ ಅಧ್ಯಕ್ಷ ವಸಂತ್ ಕುಮಾರ್, ಕಾರ್ಯದರ್ಶಿ ಪೂಜಾರೀರರವಿ, ಹುಣಸೂರು ಕಾರ್ಯದರ್ಶಿ ನೆಲ್ಲಿಪುಣಿ ಮಂಜುನಾಥ್, ಕುಯ್ಯುಮುಡಿ ಅಶ್ವಥ್ ಕುಮಾರ್, ಕೊಲ್ಪೆವೆಂಕಟೇಶ್ ಹಾಜರಿದ್ದರು.

ರೈತರಿಂದ ಪಂಜಿನ ಮೆರವಣಿಗೆ ಇಂದು

ಮೈಸೂರು: ದೆಹಲಿ ಗಡಿಯಲ್ಲಿ ದೇಶದ ರೈತರ ಒಳಿತಿಗಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ರೈತ ಹೋರಾಟ ಬೆಂಬಲಿಸಿ ರಾಜ್ಯಾದ್ಯಂತ ಡಿ.31ರಂದು ಸಂಜೆ 6 ಗಂಟೆಗೆ ಪಂಜಿನ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ತಿಳಿಸಿದರು.

ರೈತರು ಕೇಂದ್ರ ಸರಕಾರದ ಭಿಕ್ಷೆ ಕೇಳುತ್ತಿಲ್ಲ, ನಮ್ಮ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿ ಮಾಡಬೇಕೆಂದು ಕೇಳುತ್ತ ಹೋರಾಟ ಮಾಡುತ್ತಿದ್ದೇವೆ. ಈ ಬಗ್ಗೆ ಗಂಭೀರತೆ ತೋರದ ಕೇಂದ್ರ, ಸರಕಾರ ಯಾರೂ ಕೇಳದೆ ಇರುವ ಒಂದು ದೇಶ ಒಂದು ಚುನಾವಣೆ, ಒಂದು ದೇಶ ಒಂದು ಜಿಎಸ್‌ಟಿ. ಒಂದು ದೇಶ ಒಂದು ಪಡಿತರ ಕಾರ್ಡ್ ಜಾರಿಗೆ ತರುತ್ತಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು.

ದೇಶದಲ್ಲಿ ಶೇ.80ರಷ್ಟು ಇರುವ ರೈತರು ಮತ ನೀಡಿದ್ದಾರೆ. ನಮ್ಮ ಬೇಡಿಕೆಗೆ ನಿರಾಸಕ್ತಿ ತೋರುತ್ತಿದೆ. ನಾವು ಆಯ್ಕೆ ಮಾಡಿದ ಲೋಕಸಭಾ ಸದಸ್ಯರು ನಿದ್ದೆ ಮಾಡಬೇಡಿ. ಸರಕಾರದ ಗಮನ ಸೆಳೆಯಿರಿ. ನೀವು ಹಳ್ಳಿಗಳಿಗೆ ಬಂದರೆ ನಿಮ್ಮನ್ನು ಹೊರಗೆ ಇಡಬೇಕಾಗುತ್ತದೆ ಎಂದು ಎಚ್ಚರಿಸಿದರು ರೈತ ನಾಯಕ ದಲ್ಲೆವಾಲಾ ಅವರು 33 ದಿನದಿಂದ ಉಪವಾಸ ಕುಳಿತಿದ್ದಾರೆ, ನಿಮ್ಮ ಕಣ್ಣಿಗೆ ಕಾಣುತ್ತಿಲ್ಲವೇ ? ಸರಕಾರ ಸತ್ತು ಹೋಗಿದೆಯೇ ? ಈಗಾಗಲೇ ಹಳ್ಳಿ ಹಳ್ಳಿಗಳಲ್ಲಿ ಮೇಣದ ಬತ್ತಿ ಉರಿಸಿ ಪ್ರತಿಭಟನೆ ಮಾಡಲಾಗಿದೆ ಎಂದರು.

ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆಗೆ ಶಾಂತಕುಮಾರ್ ಒಕ್ಕೂಟದಲ್ಲಿ ತಿಳಿಸಿದರು.

ನಮ್ಮ ಪ್ರಧಾನಿಗಳು ವಿದೇಶಗಳಿಗೆ ಹೋಗಿ ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಿ ಎಂದು ಹಿತವಚನ ಹೇಳುತ್ತಾರೆ. ಆದರೆ, ಅವರಿಗೆ ದೇಶದ ರೈತರ ಉಪವಾಸ ಹೋರಾಟ ಕಾಣುತ್ತಿಲ್ಲವೆ ಎಂದು ಪ್ರಶ್ನಿಸಿದರು.

ಜಗಜಿತ್ ಸಿಂಗ್ ದಲೆವಾಲರನ್ನು ಆಸ್ಪತ್ರೆಗೆ ರವಾನಿಸಬೇಕು ಎಂದು ನ್ಯಾಯಾಲಯ ಆದೇಶ ನೀಡಿದರೂ ಪಾಲಿಸಿಲ್ಲ. ಈ ಬಗ್ಗೆ ನ್ಯಾಯಾಂಗ ನಿಂದನೆ ಮೊಕದ್ದಮೆ ದಾಖಲಿಸುವುದಾಗಿ ಪಂಜಾಬ್‌ಗೆ ಎಚ್ಚರಿಸಿದೆ. ಕರ್ನಾಟಕ ರೈತರ ತಂಡ ಸದ್ಯದಲ್ಲಿಯೇ ದೆಹಲಿ ಕಡೆ ಹೋಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್ ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ , ಪರಶಿವಮೂರ್ತಿ. ಅಂಬಳೆ ಮಂಜುನಾಥ್, ಸೂರಿ ಇದ್ದರು.

ಜೆಡಿಎಸ್‌ನಿಂದ ಮಹೇಶ್ ಕಣಕ್ಕೆ

ಮದ್ದೂರು: ಫೆಬ್ರವರಿ 2 ರಂದು ನಡೆಯುವ ಜಿಲ್ಲಾ ಹಾಲು ಒಕ್ಕೂಟದ (ಮನ್‌ಮುಲ್) ನಿರ್ದೇಶಕರ ಸ್ಥಾನಕ್ಕೆ ಜೆಡಿಎಸ್ ಮೈತ್ರಿ ಕೂಟದ ಅಭ್ಯರ್ಥಿಯಾಗಿ ಎನ್.ಮಹೇಶ್ ಅವರನ್ನು ಒಮ್ಮತದ ಅಭ್ಯರ್ಥಿಯಾಗಿ ಆಯ್ಕೆ ಮಾಡಿದೇವೆಂದು ಮಾಜಿ ಶಾಸಕ ಸುರೇಶ್ ಗೌಡ ಸ್ಪಷ್ಟಪಡಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜೆಡಿಎಸ್‌ನಿಂದ ಕೋಣಸಾಲೆ ಮಧು ನಿರ್ದೇಶಕ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿಯಾಗಿದ್ದರು. ಅವರಿಗೆ ಮುಂದೆ ಪಕ್ಷ ಉನ್ನತ ಸ್ಥಾನಮಾನದ ಭರವಸೆ ನೀಡಿದ್ದು ಸದ್ಯ ಎಸ್.ಮಹೇಶ್ ಅವರಿಗೆ ಸಂಪೂರ್ಣ ಬೆಂಬಲ ನೀಡುವುದಾಗಿ ಹೇಳಿದರು.

ಕೋಣಸಾಲೆ ಮಧು ಸೇರಿದಂತೆ ಹಲವಾರು ಮಂದಿ ಆಕಾಂಕ್ಷಿತರಿದ್ದರು. ಅವರನ್ನು ಸಹ ವಿಶ್ವಾಸಕ್ಕೆ ತೆಗೆದುಕೊಂಡು ಎಸ್.ಮಹೇಶ್ ಅವರನ್ನುಅಧಿಕೃತ ಅಭ್ಯರ್ಥಿಯಾಗಿ ಘೋಷಣೆ ಮಾಡಿದ್ದಾರೆ. ಬಿಜೆಪಿಯಿಂದ ಅಭ್ಯರ್ಥಿ ಆ ಪಕ್ಷದ ವರಿಷ್ಠರು ಅಧಿಕೃತವಾಗಿ ಘೋಷಣೆ ಮಾಡಲಿದ್ದಾರೆ. ಆ ವಿಷಯ ನಮಗೆ ಗೊತ್ತಿಲ್ಲ. ಎನ್‌ಡಿಎಯಿಂದ ಇಬ್ಬರೂ ಪ್ರಚಾರ ಮಾಡಲಿದ್ದಾರೆಂದರು.

ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಮಾತನಾಡಿ, ಹೈನುಗಾರಿಕೆಗೆ ಎಚ್ ಡಿ.ದೇವೇಗೌಡರು ಹಾಗೂ ಎಚ್.ಡಿ.ಕುಮಾರಸ್ವಾಮಿ ಅವರು ಅಪಾರ ಕೊಡಿಗೆ ನೀಡಿದ್ದಾರೆ. ಗೋಷ್ಠಿ ವೇಳೆ ಅಭ್ಯರ್ಥಿ ಎಸ್. ಮಹೇಶ್, ಮುಖಂಡರಾದ ಕೋಣಸಾಲೆ ಮಧು, ಅಂಕನಾಥಪುರ ಬಿಳಿಯಪ್ಪ ಇತರರಿದ್ದರು.



ಜೆಡಿಎಸ್ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಸುರೇಶ್‌ಗೌಡ ಮಾತನಾಡಿದರು.

ಚಾಮುಂಡಿ ಭಕ್ತರಿಗೆ ಸೌಲಭ್ಯ ಒದಗಿಸಿ: ಡಿಸಿ

ಮೈಸೂರು: ಹೊಸ ವರ್ಷದ ದಿನ ವಿಶೇಷವಾಗಿ ಚಾಮುಂಡೇಶ್ವರಿ ಬೆಟ್ಟದ ಚಾಮುಂಡಿ ತಾಯಿ ವೀಕ್ಷಿಸಲು ಸಾವಿರಾರು ಸಂಖ್ಯೆ ಭಕ್ತರು ಆಗಮಿಸಲಿದ್ದು, ಭಕ್ತಾದಿಗಳಿಗೆ ಯಾವುದೇ ರೀತಿ ತೊಂದರೆ ಆಗದಂತೆ ಅಗತ್ಯ ಸೌಲಭ್ಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಪಂ ಸಭಾಂಗಣದಲ್ಲಿ ನಡೆದ ಚಾಮುಂಡಿಬೆಟ್ಟದ ಅಮ್ಮನವರ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಸೌಲಭ್ಯ ಕಲ್ಪಿಸುವ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆ ಅಧಿಕಾರಿಗಳು ಅಂದು ಭಕ್ತಾದಿಗಳಿಗೆ ಬಂದೋಬಸ್ ವ್ಯವಸ್ಥೆ ಮಾಡಿ, ವಾಹನ ಸಂಚಾರ ನಿಯಂತ್ರಣ ಮಾಡಿ ಚಾಮುಂಡಿ ಬೆಟ್ಟ ರಸ್ತೆ ಮಾರ್ಗದ ಮೂಲಕ ಪ್ರವೇಶಿಸುವ ಎಲ್ಲಾ ಗೇಟ್ ಗಳಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಿ, ಹೊಸವರ್ಷದ ದಿನ ಮಾತ್ರ ಆಟೋಗಳ ಪ್ರವೇಶವನ್ನು ನಿರ್ಬಂಧಿಸಬೇಕು ಎಂದು ಸೂಚಿಸಿದರು.

ಆಟೋಗಳ ಪ್ರವೇಶವನ್ನು ನಿರ್ಬಂಧಿಸಿದ್ದು ಕೆ. ಎಸ್.ಆರ್.ಟಿ.ಸಿ.ಯ ಅಧಿಕಾರಿಗಳು ಅಗತ್ಯಕ್ಕೆ ಅನುಗುಣವಾಗಿ ಕೆ ಎಸ್ ಆರ್ ಟಿ ಸಿ ಬಸ್ ಗಳ ನಿಯೋಜಿಸಿ ಭಕ್ತಾದಿಗಳಿಂದ ಟಿಕೆಟ್ ಪಡೆದುಕೊಳ್ಳಬೇಕು. ಅಲ್ಲದೆ ನಗರದ ಇತರೆ ಕಡೆಗಳಿಂದ ನೇರ ಬೆಟ್ಟಕ್ಕೆ ಮತ್ತು ನಗರ ಬಸ್ ನಿಲ್ದಾಣ ಹಾಗೂ ರೈಲ್ವೆ ಸ್ಟೇಷನ್ ನಿಂದ ನೇರ ಚಾಮುಂಡಿ ಬೆಟ್ಟಕ್ಕೆ ಹೆಚ್ಚಿನ ಸಂಖ್ಯೆ ಬಸ್ ವ್ಯವಸ್ಥೆಯನ್ನು ಮಾಡಬೇಕು ಎಂದು ತಿಳಿಸಿದರು. ಹೊಸವರ್ಷದ ದಿನದಂದು ಸಾರ್ವಜನಿಕರಿಗೆ ಬೆಳಗ್ಗೆ 6.30ರಿಂದ ತಾವರೆಕೆರೆ ಗೇಟ್ ತೆರೆಯಲಾಗಿದ್ದು, ಭಕ್ತರು ಪಾರ್ಕಿಂಗ್ ಸ್ಥಳದಿಂದಲೇ ಸರದಿಯಾಗಿ ದೇವಸ್ಥಾನಕ್ಕೆ ಆಗಮಿಸಬೇಕು ಎಂದು ಮಾಹಿತಿ ನೀಡಿದರು.

ಜಿಪಂ ಸಭಾಂಗಣದಲ್ಲಿ ನಡೆದ ಚಾಮುಂಡಿಬೆಟ್ಟದ ಸೌಲಭ್ಯ ಕಲ್ಪಿಸುವ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಮಾತನಾಡಿದರು.

ಹೊಸ ವರ್ಷದಂದು ಹೆಚ್ಚಿನ ಸಂಖ್ಯೆ ಭಕ್ತಾದಿಗಳು ಆಗಮಿಸಲಿದ್ದು ಕಸ ಬೀಳುವ ಪ್ರಮಾಣ ಹೆಚ್ಚಾಗಿರುತ್ತದೆ. ಹಾಗಾಗಿ ಒಂದು ದಿನದ ಮಟ್ಟಿಗೆ ಪಾಲಿಕೆಯ ವತಿಯಿಂದ 10 ಜನ ಪೌರಕಾರ್ಮಿಕರ ಜತೆ ಕಾಂಪ್ಯಾಕ್ಟ್ ವಾಹನ ನಿಯೋಜಿಸಬೇಕು. ಬೆಟ್ಟಕ್ಕೆ ಮೆಟ್ಟಿಲುಗಳ ಮೂಲಕ ಹತ್ತುವ ಪಾದದ ಬಳಿ ತಾತ್ಕಾಲಿಕ ಮೊಬೈಲ್ ಟಾಯ್ಲೆಟ್ ಸ್ಥಾಪಿಸುವಂತೆ ಸೂಚಿಸಿದರು. ದಾಸೋಹ ಭವನದಲ್ಲಿ ಉಚಿತ ಅನ್ನದಾಸೋಹ ವ್ಯವಸ್ಥೆ ಕಲ್ಪಿಸುವವರು ಹಿಂದಿನ ದಿನವೇ ಟ್ಯಾಂಕರ್ ನೀರಿನ ವ್ಯವಸ್ಥೆ ಮಾಡಿ ಇಡೀ ದಿನ ಕುಡಿವ ನೀರಿನ ಪೂರೈಕೆ ಮಾಡಬೇಕು. ಈಗಾಗಲೇ ಒಂದು ಆಂಬುಲೆನ್ಸ್ ವ್ಯವಸ್ಥೆ ಇದ್ದು ಹೆಚ್ಚುವರಿಗೆ ಮತ್ತೊಂದು ಆಂಬುಲೆನ್ಸ್ ನುರಿತ ವೈದ್ಯರು, ಚಾಲಕ ಹಾಗೂ ಅಗತ್ಯ ಸಿಬ್ಬಂದಿ ನಿಯೋಜಿಸಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಪ್ರಸಾದದ ಗುಣಮಟ್ಟವನ್ನು ಅಧಿಕಾರಿಗಳು ಪರೀಕ್ಷಿಸಿ ಪ್ರಮಾಣ ಪತ್ರವನ್ನು ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಚಾಮುಂಡಿಬೆಟ್ಟ ಪ್ರಾಧಿಕಾರದ ಕಾರ್ಯದರ್ಶಿ ರೂಪಾ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

IN THE COURT OF THE CIVIL JUDGE AND J.M.F.C. AT KORATAGERE
C.Mis.No.400/2024

Petitioners: 1. Neelamma W/o Shivanna Aged about 45 years, 2. Shivanna S/o late Lakkanna Aged about 51years, 3. Rakesh DS S/O Shivanna Soorenhalli village, C N Durga hobli Koratagere tq.

V/S

Respondent: Deputy TAHSILDAR, Registrar of Birth and Death, Koratagere Taluk. - C N Durga.

PUBLIC NOTIFICATION

Petitioner have filed the above petition to obtain the death certificates petitioner 1st 1st petitioner grand father by name UDEDARAMAIAH S/O LATE SIDDAPPA DIED ON 08-10-1996 AND 1ST PETITIONER MOTHER AND FATHER BY NAME PARVATAHAMMA W/0 LINGAPPA AND LINGAPPA S/O SIDDAPPA DIED ON 14-06-1995 AND 11-05-1994 PETITIONER HOUSE Soorenhalli VILLAGE C N DURGA HOBLI KORATAGERE TQ, Is hereby notify that whoever has interest or objection to obtain the death certificates. there are any other legal heirs and there, they are hereby summoned to appear in the above court in persons or by pleader on 01/02/2025 at 11.00 AM. to answer the same, failing which the petition will be disposed off ex-parte.

Given under my hand and the seal of the Court on this day 12 day of 12 2024.

By the order of Court
Shirastedar,
Civil Judge & JMFC AT KORATAGERE.

For Petitioner Advocate AND Notary
S.K MADHUSUDAN BA L,LB,
koratagere.

IN THE COURT OF THE CIVIL JUDGE AND J.M.F.C. AT KORATAGERE
C.Mis No: 389/2024

PETITIONER : Venkatachalaiah S/o Late Thimmarayappa Aged about 66 years, R/o Bhaktharahalli Village, Holavanahalli Hobli, Koratagere Taluk, Tumakuru Dist.

V/s

RESPONDENT : Deputy Tahasildar, Nada Kacheri, Holavanahalli Hobli, Koratagere Taluk, Tumakuru Dist.

PUBLIC NOTIFICATION

Whereas the petitioner have filed the above petition to obtain the death certificate of the petitioner Grand-father by name Gangappa S/o Late Venkataravanappa died on 17-04-1988 at Bhaktharahalli Village, Holavanahalli Hobli, Koratagere Taluk, Tumakuru Dist. If anybody has any objection or right with respect to the above said fact and petition may filed objection in the above said case by personally or by counsel. The case is posted 18-01-2025 at 11-00 a.m. Otherwise the said matter will be disposed accordance with law.

Given under my hand and the seal of the court on this 4th day of December 2024 at Koratagere.

By Order of the Court
Sheristedar
Civil Judge and JMFC Court
Koratagere

Advocate for petitioner:
B.H. Nagendrappa,
Koratagere.

ಮಂತ್ರಮಾಂಗಲ್ಯಕೊಟ್ಟವರು

ಚಾಮರಾಜನಗರ: ಇಡೀ ಜಗತ್ತಿಗೆ ವಿಶ್ವ ಮಾನವ ಸಂದೇಶ ಸಾರಿದ ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯದ ಪರಿಕಲ್ಪನೆ ಜೀವನದಲ್ಲಿ ಪ್ರತಿಯೊಬ್ಬರೂ ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಮೈಸೂರು ರಂಗಾಯಣದ ಅರಸೀಕೆರೆ ಯೋಗಾನಂದ ಹೇಳಿದರು.

ನಗರದ ರೋಟರಿ ಭವನದಲ್ಲಿ ಎದ್ದೇಳು ಕರ್ನಾಟಕ, ಪುನರ್ಜಿತ್ ನಾಗವಳ್ಳಿ, ಶಾಂತಲಾ ಕಲಾವಿದರು, ರೋಟರಿ ಸಂಸ್ಥೆ ಸಹಯೋಗದಲ್ಲಿ ನಡೆದ ಕುವೆಂಪು ಜನ್ಮದಿನಾಚರಣೆ ವಿಶ್ವಮಾನವ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕುವೆಂಪು ಒಬ್ಬ ಶ್ರೇಷ್ಠ ಕವಿ. ಅವರು ತಮ್ಮ ಆಲೋಚನೆಗಳನ್ನು ಕೃತಿಗಳ ಮೂಲಕ ಸಮಾಜಕ್ಕೆ ನೀಡಿದ್ದು, ಅವರ ಈ ಬರಹಗಳು ಹಲವಾರು ಸಾಮಾಜಿಕ ಸುಧಾರಣೆ ತಂದಿದೆ. ದುಂದುವೆಚ್ಚದ ಮದುವೆ ತಡೆಯುವ ಸಲುವಾಗಿ ಪ್ರಪಂಚಕ್ಕೆ ಮಂತ್ರಮಾಂಗಲ್ಯವನ್ನು ಅವರು ಪರಿಚಯಿಸಿದ್ದಾರೆ. ಕುವೆಂಪು ರಚಿಸಿದ ನಾಡಗೀತೆಯನ್ನು ದಿನನಿತ್ಯ ಹಾಡುವ ಮೂಲಕ ಪ್ರತಿದಿನ ಅವರನ್ನು ನಾವು

ನೆನೆಯುತ್ತಿದ್ದೇವೆ. ಸಾಹಿತ್ಯ ಲೋಕದಲ್ಲಿ ಪ್ರಥಮ ಬಾರಿಗೆ ಜ್ಞಾನಪೀಠ ಪ್ರಶಸ್ತಿ ಕರುನಾಡಿಗೆ ತಂದುಕೊಟ್ಟ ಶ್ರೇಷ್ಠ ಕವಿಯಾಗಿದ್ದಾರೆ ಎಂದರು.

ಶಾಂತಲಾ ಕಲಾವಿದರ ಸಂಘದ ಕೆ. ವೆಂಕಟರಾಜು ಮಾತನಾಡಿ, ಕುವೆಂಪು ಬರೆದ ಎರಡು ಕಾದಂಬರಿಗಳಾದ 'ಕಾನೂರು ಸುಬ್ಬಮ್ಮ ಹೆಗ್ಗಡತಿ' ಮತ್ತು 'ಮಲೆಗಳಲ್ಲಿ ಮದುಮಗಳು' ಭಾರತೀಯ ಸಾಹಿತ್ಯ ಪ್ರಪಂಚದಲ್ಲೇ ಶ್ರೇಷ್ಠ ಕೃತಿಗಳೆಂಬ ಪ್ರಶಂಸೆಗೆ ಪಾತ್ರವಾಗಿವೆ ಎಂದರು.

ಮೆರವಣಿಗೆ: ಕುವೆಂಪು ಅವರ ಸಂದೇಶಗಳುಳ್ಳ ಭಿತ್ತಿಚಿತ್ರ ಹಿಡಿದು ಮೆರವಣಿಗೆ ನಡೆಯಿತು. ರೋಟರಿ ಅಧ್ಯಕ್ಷ ರಾಮಸಮುದ್ರ ನಾಗರಾ ಜು, ಪುನರ್ಜಿತ್ ಸಂಸ್ಥೆಯ ಆಡಳಿತಾಧಿಕಾರಿ ವೀರಭದ್ರನಾಯಕ ಇದ್ದರು.

ತ್ರಿವೇಣಿ ಸಂಗಮದ ಕುಂಭ ಮೇಳ: ಸ್ಥಳ ಪರಿಶೀಲನೆ

ತಿ.ನರಸೀಪುರ: ತಿರಮಕೂಡಲಿನ ತ್ರಿವೇಣಿ ಸಂಗಮದಲ್ಲಿ ಫೆ.10,11 ಮತ್ತು 12 ರಂದು ನಡೆಯಲಿರುವ ಕುಂಭಮೇಳ ಮಹೋತ್ಸವಕ್ಕಾಗಿ ಜಿಲ್ಲಾಧಿಕಾರಿ ಲಕ್ಷ್ಮೀ ಕಾಂತರೆಡ್ಡಿ ಅವರು ಸ್ಥಳ ಪರಿಶೀಲನೆ ನಡೆಸಿದರು.

ಕಾಶಿಗಿಂತಲೂ ಗುಲಗಂಜಿ ಗಾತ್ರದಲ್ಲಿ ಹೆಚ್ಚಿರುವ ತಿರುಮಕೂಡಲು ಕ್ಷೇತ್ರದಲ್ಲಿ ಮೂರು ವರ್ಷಕ್ಕೊಮ್ಮೆ ಕುಂಭಮೇಳದ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಈ ವರ್ಷವೂ ಕುಂಭ ಮೇಳ ಫೆ.10, 11, 12 ರಂದು ನಡೆಯುತ್ತಿದ್ದು ಡಿಸಿ ಸ್ಥಳ ಪರಿಶೀಲಿಸಿ, ಸಕಲ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಮಾತನಾಡಿದ ಅವರು, ಅವಶ್ಯಕತೆ ಇರುವ ಕಡೆ ಸ್ನಾನ ಘಟ್ಟಗಳನ್ನು ನಿರ್ಮಿಸುವಂತೆ ಸಲಹೆ ನೀಡಿದರು. ಗಣ್ಯರು, ಸ್ಥಳೀಯ ಭಕ್ತರಿಗೆ ಪುಣ್ಯಸ್ನಾನ ಮಾಡಲು 1000–2000 ಜನರಿಗೆ ಅನುವಾಗುವಂತೆ ಸ್ನಾನಘಟ್ಟಗಳನ್ನು ನಿರ್ಮಿಸಲು ಸೂಚಿಸಿದರು. ನದಿನೀರು ಹೆಚ್ಚಿಗೆ ಇರುವುದರಿಂದ ಆಯಕಟ್ಟಿನ ಸ್ಥಳಗಳಲ್ಲಿ ಸ್ನಾನಘಟ್ಟಗಳನ್ನು ನಿರ್ಮಿಸಬೇಕು. ಕುಂಭಮೇಳದ ಪೂರ್ವ ತಯಾರಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ 2 ದಿನದೊಳಗೆ ಸಲ್ಲಿಸುವಂತೆ ಡಿಸಿ ತಿಳಿಸಿದರು. ಹೆಚ್ಚುವರಿ ಮೆಟ್ಟಿಲುಗಳನ್ನು ನಿರ್ಮಿಸಿ ಭಕ್ತರ ಪುಣ್ಯಸ್ನಾನಕ್ಕೆ ತೊಂದರೆಯಾಗದಂತೆ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ಕುಂಭಮೇಳಕ್ಕಾಗಿ ಜಿಲ್ಲಾಧಿಕಾರಿ ಲಕ್ಷ್ಮೀ ಕಾಂತರೆಡ್ಡಿ ಅವರು ಸ್ಥಳ ಪರಿಶೀಲನೆ ನಡೆಸಿದರು.

ಪ್ರತ್ಯೇಕ ಜಾಗ ಗುರುತಿಸಿ: ತ್ರಿವೇಣಿ ಸಂಗಮದಲ್ಲಿ ನೀರಿನ ಹರಿವು ಹೆಚ್ಚು ಇರುವುದರಿಂದ ನದಿಯ ಮಧ್ಯಭಾಗದಲ್ಲಿ ಹಿಂದಿನ ಕುಂಭಮೇಳದಂತೆ ಧಾರ್ಮಿಕ ಕಾರ್ಯ, ಯಾಗ, ಹೋಮ ಮತ್ತು ಹವನ ಕಾರ್ಯಗಳಿಗೆ ವೇದಿಕೆಗಳನ್ನು ನಿರ್ಮಿಸಲು ಸಾಧ್ಯವಾಗಲ್ಲ. ಸಮೀಪದಲ್ಲೇ ಪ್ರತ್ಯೇಕ ಸ್ಥಳವನ್ನು ಗುರುತಿಸಿ ಧಾರ್ಮಿಕ ಕಾರ್ಯಕ್ಕೆ ವೇದಿಕೆ, ಯಾಗ, ಹೋಮ ಮತ್ತು ಹವನಗಳಿಗೆ ಕ್ರಮವಹಿಸುವಂತೆ ಸೂಚಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಉಪವಿಭಾಗಾಧಿಕಾರಿ ರಕ್ಷಿತ್, ಜಿಲ್ಲಾ ಕಾರ್ಯಪಾಲಕ ಅಭಿಯಂತರ ಜಿ. ರಾಜು, ತಹಸೀಲ್ದಾರ್ ಟಿ.ಎಸ್.ಸುರೇಶಾಚಾರ್, ಕಾವೇರಿ ನೀರಾವರಿ ನಿಗಮದ ಎಇಇ ಗಳಾದ ಎಸ್.ಮಂಜುನಾಥ್, ಶಾಂತಕು ಮಾರ್, ಮಾದೇಗೌಡನ ಹುಂಡಿ ಎಇ ಮಂಜು ನಾಥ್, ರವೀಂದ್ರ, ಡಿವೈಎಸ್ಪಿ ಜಿ. ಎಸ್. ರಘು, ವೃತ್ತ ನಿರೀಕ್ಷಕರಾದ ಮನೋಜಕುಮಾರ್, ಧನಂಜಯ್, ಜಿ ಪಂ ಇಂಜಿನಿಯರ್ ಚರಿತಾ, ಪಿಡಬ್ಲುಡಿ ಕಾರ್ಯಪಾಲಕ ಅಭಿಯಂತ ಸತೀಶ್ ಚಂದ್ರನ್ ಇದ್ದರು.

ಸಮಾಚಾರ ಸಣ್ಣದಲ್ಲ

ಕಾರು, ಆಟೋ, ಲಾರಿ ಅಪಘಾತ: ಒಬ್ಬ ಸಾವು

ನೆಲಮಂಗಲ: ಬೆಂಗಳೂರು - ತುಮಕೂರು ರಸ್ತೆಯಲ್ಲಿ ಒಂದೇ ಕುಟುಂಬದ ಆರು ಜನರನ್ನು ಬಲಿ ಪಡೆದ ಘಟನೆ ಮಾಸುವ ಮುನ್ನವೇ , ಮತ್ತೊಂದು ಸರಣಿ ಅಪಘಾತ ಸಂಭವಿಸಿದೆ. ಇಲ್ಲಿನ ಸೋಂಪುರ ಹೋಬಳಿಯ ರಾ.ಹೆದ್ದಾರಿ 48 ರ ಎಡೇಹಳ್ಳಿ ಬಳಿ ಸೋಮವಾರ ಬೆಳಗ್ಗೆ ಸರಣಿ ಅಪಘಾತ ಸಂಭವಿಸಿ,ಒಬ್ಬ ಸಾವನ್ನಪ್ಪಿದ್ದು, ಹಲವರು ಗಾಯಾಳುಗಳಾಗಿದ್ದಾರೆ. ತುಮಕೂರಿನಿಂದ-ಬೆಂಗಳೂರಿನ ಕಡೆಗೆ ಚಲಿಸುತ್ತಿದ್ದ ಪ್ಯಾಸೆಂಜರ್ ಆಟೋ ದಾಬಸ್ ಪೇಟೆ ಕೈಗಾರಿಕಾ ಪ್ರದೇಶದ ಹೆಬ್ಬಾಗಿಲಿನ ಬಳಿ ಆಟೋ ನಿಲ್ಲಿಸಿ ಪ್ರಯಾಣಿಕರನ್ನು ಇಳಿಸುವಾಗ, ಹಿಂಬದಿಯಿಂದ ವೇಗವಾಗಿ ಬಂದ ಕಾರು, ಆಟೋಗೆ ಗುದ್ದಿದೆ. ಆಟೋ ಮುಂದಿದ್ದ ಲಾರಿಗೆ ಡಿಕ್ಕಿಯಾಗಿ ಮೂರು ವಾಹನದ ಮಧ್ಯೆ ಸರಣಿ ಅಪಘಾತವಾಗಿದೆ. ಅಪಘಾತದಲ್ಲಿ ಸೆಕ್ಯೂರಿಟಿ ಕೆಲಸಗಾರ ನಿಡವಂದ ವಾಸಿಯಾಗಿದ್ದ ವೀರಣ್ಣ(55) ಸಾವುನ್ನಪ್ಪಿದ್ದು, ತಿಪ್ಪಗೊಂಡನಹಳ್ಳಿಯ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಎಂಬಿಬಿಎಸ್ ವಿದ್ಯಾರ್ಥಿ ನೂತನ್ ಮತ್ತು ಲಕ್ಷ್ಮಮ್ಮ ಎಂಬವರ ಸ್ಥಿತಿ ಗಂಭೀರವಾಗಿದೆ.

ಪ್ರಯಾಣಿಕರ ನರಳಾಟ: ಅಪಘಾತದಿಂದ ತೀವ್ರ ಗಾಯಗೊಂಡವರ ನರಳಾಟ ಕರುಳು ಹಿಂಡುವಂತಿತ್ತು. ಅವರನ್ನು ಸ್ಥಳೀಯರು ಆಸ್ಪತ್ರೆಗೆ ಕಳುಹಿಸಿಕೊಟ್ಟರು. ನೆಲಮಂಗಲ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೀರೇಶ್ವರ ಸೊಸೈಟಿ ಶಾಖೆ ಉದ್ಘಾಟನೆ

ನೆಲಮಂಗಲ : ಉತ್ತಮ ಸಾಧನೆ ಮೆರೆದು ಕರ್ನಾಟಕ ಮತ್ತು ಮಹಾರಾಷ್ಟ್ರ ಗೋವಾ ರಾಜ್ಯಗಳ ಜನರ ಪ್ರೀತಿಗೆ ಪಾತ್ರವಾಗಿ ಜನಮನ್ನಣೆ ಪಡೆದಿರುವ ಬೀರೇಶ್ವರ ಕೋ ಆಪ್ ಕ್ರೆಡಿಟ್ ಸೊಸೈಟಿಯ ಸೇವೆ ಶ್ಲಾಘನೀಯ ಎಂದು ಡಾ. ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ನಗರದ ಸುಭಾಷ್ ನಗರದಲ್ಲಿ ಬೀರೇಶ್ವರ ಕೋ ಆಪರೇಟಿವ್ ಸೊಸೈಟಿಯ 224ನೇ ಶಾಖೆ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಅಣ್ಣಾಸಾಹೇಬ್ ಶಂಕರ್ ಜೊಲ್ಲೆ ಹಾಗೂ ಶಶಿಕಲಾ ಜೊಲ್ಲೆ ಅವರ ಪರಿಶ್ರಮದಿಂದ ಈ ಸೊಸೈಟಿಯು ಇಂದು ರಾಜ್ಯದಲ್ಲಿ ಹೆಮ್ಮರವಾಗಿ ಬೆಳೆದಿದೆ ಎಂದರು. ಮಾಜಿ ಶಾಸಕ ಎಂ ವಿ ನಾಗರಾಜು, ನಗರಸಭೆ ಸದಸ್ಯರಾದ ಅಂಜನಮೂರ್ತಿ, ರಾಮಮೂರ್ತಿ, ಮುನಿರಾಜು, ಕೃಪಾನಂದ, ನೆಲಮಂಗಲ ಶಾಖೆ ಮ್ಯಾನೇಜರ್ ರಮೇಶ್ ಉಪಸ್ಥಿತರಿದ್ದರು.

ಗೆಜೆಟಿಯರ್
ಪ್ರತಿ ಮಂಗಳವಾರ
ಇದು ಅನುಕ್ಷಣದ ಆ್ಯಪ್

78 ಲಕ್ಷ ನಿವೃತ್ತರ ಹೋರಾಟ

ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್‌ಗೆ ಎನ್‌ಎಸಿ ರಾಷ್ಟ್ರೀಯ ಅಧ್ಯಕ್ಷ ಚಾಲನೆ

ತುಮಕೂರು: ಪ್ರಧಾನಿ ಮತ್ತು ವಿತ್ತ ಸಚಿವರ ಜತೆ ಎರಡರೆಡು ಬಾರಿ ಚರ್ಚೆ ನಡೆಸಿದ್ದು,ಸುಪ್ರಿಂಕೋರ್ಟಿನ ಆದೇಶದಂತೆ ಕನಿಷ್ಠ 7500 ರೂ. ಮಾಸಿಕ ಪಿಂಚಿಣಿ ನೀಡುವ ಭರವಸೆ ನೀಡಿದ್ದಾರೆ. ಒಂದು ವೇಳೆ ಸರಕಾರ ಮಾತಿಗೆ ತಪ್ಪಿದರೆ, ದೇಶದ 78 ಲಕ್ಷ ನಿವೃತ್ತ ನೌಕರರು ತಮ್ಮ ಹಕ್ಕುಗಳಿಗಾಗಿ ಬೀದಿಗಿಳಿಯುವುದು ಅನಿವಾರ್ಯವಾಗಲಿದೆ ಎಂದು ಎನ್‌ಎಸಿ ರಾಷ್ಟ್ರೀಯ ಅಧ್ಯಕ್ಷರಾದ ಕಮಾಂಡರ್ ಅಶೋಕ್ ರಾವುತ್ ತಿಳಿಸಿದ್ದಾರೆ.

ನಗರದ ಕೊಲ್ಲಾಪುರದಮ್ಮ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ತುಮಕೂರು ವಿಭಾಗ, ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್ , ವತಿಯಿಂದ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್ ಗೆ ಚಾಲನೆ ನೀಡಿ ಮಾತನಾಡಿದರು.

ತಮ್ಮ ಜೀವಿತಾವಧಿಯನ್ನು ಜನರ ಸೇವೆಗೆ ಮುಡಿಪಾಗಿಟ್ಟಿರುವ ನಾವು ಮಾಸಿಕ 800 ರೂ.ಗಳಿಂದ 1800 ರು.ವರೆಗೆ ಮಾತ್ರ ಪಿಂಚಿಣಿ ಪಡೆಯುತ್ತಿದ್ದು, ಇಂದಿನ ಬೆಲೆ ಹೆಚ್ಚಳದಲ್ಲಿ ಯಾವುದಕ್ಕೂ ಸಾಲದಾಗಿದೆ. ಹಾಗಾಗಿ ಸುಪ್ರಿಂಕೋರ್ಟಿನ ಆದೇಶದಂತೆ ಕನಿಷ್ಠ ಮಾಸಿಕ 7500 ರೂ. ಪಿಂಚಿಣಿ ಮತ್ತು ಡಿ.ಎ. ನೀಡಬೇಕೆಂಬುದು ನಮ್ಮ ಬೇಡಿಕೆಯಾಗಿದೆ ಎಂದರು.

ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ್ ಮಾತನಾಡಿ, ನಮ್ಮ ನಿಗಮದಲ್ಲಿ ನಿವೃತ್ತ ನೌಕರರಿಗೆ ವೇತನ ನೀಡುವುದಕ್ಕೆ ಪ್ರಥಮ ಆದ್ಯತೆ ನೀಡಲಾಗಿದೆ.ನಿವೃತ್ತ ನೌಕರರು ತಮ್ಮ ಕಷ್ಟ ಹೇಳಿಕೊಳ್ಳಲು ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್ ಸ್ಥಾಪಿಸಿದ್ದು ಒಳ್ಳೆಯ ಬೆಳವಣಿಗೆ. ಎನ್.ಎ.ಎಸ್ ಜೊತೆ ಕೈಜೋಡಿಸಿ ನಿಮ್ಮ ಶಕ್ತಿ ಮತ್ತಷ್ಟು ಹೆಚ್ಚಿಸಿಕೊಂಡಿದ್ದೀರಿ. ಹಿಂಜರಿಕೆ ಬಿಟ್ಟು, ಬೇಡಿಕೆಗಳ ಈಡೇರಿಕೆಗೆ ಮುಂದಾಗಿ ಎಂದರು.

ಮಹಿಳಾ ಘಟಕದ ಅಧ್ಯಕ್ಷೆ ಶೋಬಾ ಅರಸ್, ಮುಖಂಡರಾದ ಸರೀತಾ ನಾರ್ಕೆಡ್,ಕಾನೂನು ಸಲಹೆಗಾರರಾದ ನಂಜುಂಡೇಗೌಡ, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ ಅಧ್ಯಕ್ಷ ಭೀಮಾನಾಯಕ್ ಮಾತನಾಡಿದರು. ವೇದಿಕೆಯಲ್ಲಿ ಜಿಲ್ಲಾಧ್ಯಕ್ಷರಾದ ದೊಡ್ಡೇಗೌಡ,ಎಂ.ಎಲ್, ಉಮೇಶ್, ತುಳಿಸಿರಾಮ್,ನಾಗರಾಜು, ಎಂ.ಷಡಕ್ಷರಿ, ಶಿವಶಂಕರ್, ಉಮೇಶಕುಮಾರ್, ರಾಜಗೋಪಾಲ್, ರಾಜಶೇಖರ್, ಎಂ.ಎಸ್.ವೆಂಕಟನಾರಾಯಣ ಮತ್ತಿತರರು ಉಪಸ್ಥಿತರಿದ್ದರು.

ತುಮಕೂರಿನಲ್ಲಿ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್ ಗೆ ಚಾಲನೆ ನೀಡಲಾಯಿತು.

ಕನಿಷ್ಠ 7500 ರೂ. ಮಾಸಿಕ ಪಿಂಚಣಿ ನೀಡಲಿ

ಎನ್‌ಇಸಿ ಕರ್ನಾಟಕ ಅಧ್ಯಕ್ಷ ಜಿ.ಎಸ್.ಎಂ.ಸ್ವಾಮಿ ಮಾತನಾಡಿ, ಎನ್‌ಎಸಿ ದೇಶದ 19ಕ್ಕೂ ಹೆಚ್ಚು ರಾಜ್ಯಗಳಲ್ಲಿ ಕೆಲಸ ಮಾಡುತ್ತಿದ್ದು,ಪ್ರಧಾನಿ, ವಿತ್ತ ಸಚಿವರನ್ನು ಭೇಟಿ ಮಾಡಿ,ನಿವೃತ್ತ ನೌಕರರ ಸಮಸ್ಯೆ ಗಮನಕ್ಕೆ ತರಲಾಗಿದೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಕಾಲದಲ್ಲಿ ಜಾರಿಗೆ ಬಂದ ಇಪಿಎಸ್ -95 ಯೋಜನೆ ಪರಿಷ್ಕರಿಸಿ, ಸುಪ್ರಿಂಕೋರ್ಟಿನ ನಿರ್ದೇಶನದಂತೆ ಕನಿಷ್ಠ 7500 ರೂ. ಮಾಸಿಕ ಪಿಂಚಿಣಿ ನೀಡಬೇಕೆಂದು ಕಳೆದ 6 ವರ್ಷಗಳಿಂದ ಸತ್ಯಾಗ್ರಹ ನಡೆಸಲಾಗುತ್ತಿದೆ. ನಿವೃತ್ತ ನೌಕರರು ಎನ್ .ಎ.ಸಿ.ಗೆ ಸದಸ್ಯರಾಗುವ ಮೂಲಕ ನಮ್ಮ ಸಂಘಟನೆಯನ್ನು ಬಲಪಡಿಸಬೇಕೆಂದರು.

ಹಿರಿಯರಿಗೆ ನೋಡಿಕೊಳ್ಳಿ

ಅರಸೀಕೆರೆ: ಜಾತಿ ,ಮತ, ಧರ್ಮಗಳ ಭೇದವಿಲ್ಲದೇ ಎಲ್ಲರಿಗೂ ಶಿಕ್ಷಣ ನೀಡುವ ಕಾನೂನು ಕೂಡ ಮಾನವ ಹಕ್ಕುಗಳಲ್ಲಿ ಒಂದು. ಯಾವುದೇ ವರ್ಗಗಳಿದ್ದರೂ ಶಿಕ್ಷಣದಲ್ಲಿ ವಂಚಿತರಾಗಬಾರದು ಎಂದು ಸಿವಿಲ್ ನ್ಯಾಯಾಧೀಶರಾದ ಕಿರಣ್ ಕುಮಾರ್ ಡಿ ವಡಿಗೇರಿ ಹೇಳಿದರು.

ಬಸವರಾಜೇಂದ್ರ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದ ಮಾನವ ಹಕ್ಕುಗಳ ದಿನಾಚರಣೆ ಮತ್ತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮೂಲಭೂತ ಸೌಲಭ್ಯಗಳ ವಂಚನೆ ಸೇರಿದಂತೆ ಶಿಕ್ಷಣ ಕ್ಷೇತ್ರಕ್ಕೂ ಅನ್ವಯಿಸುವಂತೆ ವಿಶ್ವಸಂಸ್ಥೆಯಿಂದ ಮಾನವ ಹಕ್ಕು ರೂಪಿಸಿ ಅನುಷ್ಠಾನಕ್ಕೆ ತರಲಾಯಿತು. ಜೀತದಾಳು ಮತ್ತು ವರ್ಣಬೇಧ ನೀತಿಗಳು ಇಡೀ ವಿಶ್ವದಲ್ಲಿ ಜಾರಿಯಲ್ಲಿತ್ತು. ವರ್ಣಬೇಧ ಪ್ರಭಾವನ್ನು ಬಳಸಿ ಜೀತದಾಳು ಪದ್ಧತಿಗೆ ಅಮೇರಿಕಾ, ಫ್ರಾನ್ಸ್ ದೇಶಗಳು ಸೇರಿ ದಕ್ಷಿಣ ಆಫ್ರಿಕಾದ ಖಂಡದ ಜನರನ್ನು ಬಳಸಲಾಗುತ್ತಿತ್ತು ಎಂದರು. ಮುಖ್ಯ ಶಿಕ್ಷಕ ಕೆ.ಆರ್ ದಯಾನಂದ ಮಾತನಾಡಿ, ಮಾನವ ಹಕ್ಕುಗಳ ಮೂಲಕ ಶಿಕ್ಷಣಕ್ಕೆ ಪ್ರತ್ಯೇಕ ಸ್ಥಾನವನ್ನು ನೀಡಿದ್ದು, ಪೋಷಕರು ನೀಡುವ ಆಸ್ತಿಗಿಂತ ಅವರು ಕೊಡಿಸುವ ಶಿಕ್ಷಣವೇ ಆಸ್ತಿಯಾಗಿದೆ. ಹಿರಿಯರನ್ನು ನೋಡಿಕೊಳ್ಳುವುದು ಮತ್ತು ಸೌಲಭ್ಯ ನೀಡುವುದು ಕೂಡ ಮಾನವ ಹಕ್ಕು. ವಿದ್ಯಾರ್ಥಿಗಳು ಕಲಿಕೆಯ ಜೊತೆ ಸಂವಿಧಾನ ಮತ್ತು ಕಾನೂನುಗಳ ಅರಿವು ಪಡೆಯಬೇಕು ಎಂದರು. ವಕೀಲರಾದ ಟಿ.ಟಿ ವಿರೂಪಾಕ್ಷ, ಸಿದ್ದಮಲ್ಲಪ್ಪ ಮತ್ತು ಜಮೀಲ್ ಪಾಷಾ ಇವರು ಮಾನವ ಹಕ್ಕುಗಳ ಬಗ್ಗೆ ಉಪನ್ಯಾಸ ನೀಡಿದರು. ಶಿಕ್ಷಣ ಸಂಯೋಜಕ ವೈ.ಸಿ ಮಲ್ಲೇಶ್, ಕಾರ್ಯಕ್ರಮ ಸಂಯೋಜಕ ಮುದ್ದುರಾಜ್ ಇದ್ದರು.

ಬಸವರಾಜೇಂದ್ರ ಪ್ರೌಢಶಾಲೆಯಲ್ಲಿ ಕಾನೂನು ಅರಿವು ಕಾರ್ಯಕ್ರಮ ನಡೆಯಿತು.

ರೈತರ ಹೋರಾಟ ಬೆಂಬಲಿಸಿ ಪ್ರತಿಭಟನೆ

ತಿ. ನರಸೀಪುರ: ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು, ರೈತರ ಸಾಲ ಮನ್ನಾ ಮಾಡಬೇಕು, 60 ವರ್ಷ ತುಂಬಿದ ರೈತರಿಗೆ ಮಾಸಾಶನ ಎಂಬಿತ್ಯಾದಿ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ದೆಹಲಿ ಗಡಿಯಲ್ಲಿ ಸತ್ಯಾಗ್ರಹ ನಡೆಸುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ ಹೋರಾಟಕ್ಕೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘ ಬನ್ನೂರು ಗ್ರಾಮಾಂತರ ಘಟಕದ ಮುಖಂಡರು ಪ್ರತಿಭಟನೆ ನಡೆಸಿ ಬೆಂಬಲಿಸಿದರು.

ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ಮಾತನಾಡಿ, ಕೇಂದ್ರದ ವಿರುದ್ಧ ವಿವಿಧ ಘೋಷಣೆ ಕೂಗಿದರು.

ದೇಶಾದ್ಯಂತ ಮೇಣದ ಬತ್ತಿ ಬೆಳಗಿಸಿ ಹೋರಾಟ ನಡೆಸಬೇಕೆಂದು ಕಿಸಾನ್ ಮೋರ್ಚಾದ ಮುಖಂಡರು ಕರೆ ನೀಡಿದ್ದರು. ರೈತರ ಹೋರಾಟಕ್ಕೆ ಜಯವಾಗಲಿ ಎಂದು ಪ್ರಾರ್ಥಿಸಿ ಮೇಣದ ಬತ್ತಿ ಬೆಳಗಿಸಲಾಗಿದೆ ಎಂದರು.

ಪ್ರತಿಭಟನೆಯಲ್ಲಿ ತಾಲೂಕು ಅಧ್ಯಕ್ಷ ಕುರುಬೂರು ಸಿದ್ದೇಶ್, ತಾಲೂಕು ಸಂಘಟನಾ ಕಾರ್ಯದರ್ಶಿ ಕುರು ಬೂರು ಪ್ರದೀಪ್, ಮುಖಂಡರಾದ ಅತ್ತಹಳ್ಳಿ ಸಿ.ಲಿಂಗಣ್ಣ, ಅರುಣ್ ಕುಮಾರ್, ಬನ್ನೂರು ಸೂರಿ, ನಂಜೇಗೌಡ, ಮೆಡಿಕಲ್ ಮಹೇಶ್,ನಂದಿ ಸ್ಟೋರ್ ನಟೇಶ್, ಹನುಮ ನಾಳು ಲೋಕೇಶ್ ರಾಮ,ಎ ಪಿ ನವೀನ್, ಶಿವರಾಜ್,ವಿನಯ್,ಚೇತನ್,ಮಹೇಶ್, ವರದರಾಜ್, ರಮೇಶ,ಕಾಳಪ್ಪ,ಹೊನ್ನಯ್ಯ,ರಾಚಾಚಾರಿ ಭಾಗವಹಿಸಿದ್ದರು.

ದೆಹಲಿಯಲ್ಲಿ ರೈತರ ಸಂಘಟನೆ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳಗಾರರ ಸಂಘ ಬನ್ನೂರು ಗ್ರಾಮಾಂತರ ಮುಖಂಡರ ಪ್ರತಿಭಟನೆ.

ರಾಮನಗರ: ಆನೆ ಸೆರೆ ಕಾರ್ಯಾಚರಣೆ ಯಶಸ್ವಿ

ರಾಮನಗರ: ಜಿಲ್ಲೆಯಲ್ಲಿ ದಾಂಧಲೆ ಎಬ್ಬಿಸಿ, ರೈತರಿಗೆ ಉಪಟಳ ನೀಡುವುದರ ಜೊತೆಗೆ ಅರಣ್ಯ ಇಲಾಖೆಗೆ ತಲೆನೋವಾಗಿದ್ದ ಮಕ್ನಾ ಆನೆಯನ್ನು ಸೆರೆ ಹಿಡಿಯುವ ಮೂಲಕ ಅರಣ್ಯ ಇಲಾಖೆ ಆನೆ ಸೆರೆ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಜಿಲ್ಲೆಯ ರೈತರು ಹಾಗೂ ಅರಣ್ಯ ಇಲಾಖೆಯ ನೆಮ್ಮದಿ ಕಸಿದು ಹಗಲು ರಾತ್ರಿ ಎನ್ನದೆ ತೀವ್ರ ಉಪಟಳ ನೀಡುತ್ತಿದ್ದ ನಾಲ್ಕು ಕಾಡಾನೆಗಳ ಪೈಕಿ ಎರಡು ಆನೆಗಳನ್ನು ಹಿಡಿಯಲು ಅರಣ್ಯ ಇಲಾಖೆ ಅನುಮತಿ ನೀಡಲಾಗಿತ್ತು. ನಂತರ ಡಿ.27 ರಂದು ಸೆರೆ ಕಾರ್ಯಾಚರಣೆಗೆ ಇಳಿದ ಸಾಕಾನೆಗಳ ತಂಡ ಕೆಲವೇ ಗಂಟೆಗಳಲ್ಲಿ ಟಸ್ಕರ್ ಆನೆ ಹಿಡಿಯಲಾಗಿತ್ತು.

ಚಿಕ್ಕಮಣ್ಣು ಗುಡ್ಡೆ ವ್ಯಾಪ್ತಿಯ ತಿಮ್ಮೇಗೌಡನದೊಡ್ಡಿ ಬಳಿ ಸುಮಾರು 46 ವರ್ಷ ಪ್ರಾಯದ ಗಂಡಾನೆಯನ್ನು ಭೀಮ, ಏಕಲವ್ಯ,ಧನಂಜಯ, ನೇತೃತ್ವದ ಪಳಗಿದ ಸಾಕಾನೆ ತಂಡ ಹಾಗೂ ಅರಣ್ಯ ಇಲಾಖಾ ಸಿಬ್ಬಂದಿಗಳು ಸೆರೆ ಹಿಡಿದ್ದಿದ್ದಾರೆ.

ಒಮ್ಮೆ ಅರಣ್ಯ ಇಲಾಖೆಗೆ ಸೆರೆಸಿಕ್ಕಿ ಬಳಿಕ ಮತ್ತೇ ಸ್ವಸ್ಥಾನಕ್ಕೆ ಮರಳಿದ್ದ ಮಕ್ನಾ, ಟಸ್ಕರ್ ಜೊತೆ ಸೇರಿ ಸಾಕಷ್ಟು ದಾಂಧಲೆ ಎಬ್ಬಿಸುತ್ತಿತ್ತು.

ಆನೆಸೆರೆ ಕಾರ್ಯಾಚರಣೆಯಲ್ಲಿ ಸೆರೆ ಸಿಕ್ಕ ಮಕ್ನಾ ಹೆಸರಿನ ಆನೆ.

ರೈತರಿಗೆ ಉಪಟಳ ನೀಡುತ್ತಿದ್ದ ನಾಲ್ಕು ಕಾಡಾನೆಗಳ ಪೈಕಿ ಮಕ್ನಾ ಹಾಗೂ ಟಸ್ಕರ್ ಹೆಸರಿನ ಆನೆಗಳನ್ನು ಸೆರೆ ಹಿಡಿದಿರುವುದು ಸಂತಸದ ಸಂಗತಿ. ಸದ್ಯಕ್ಕೆ ಎರಡು ಆನೆಗಳನ್ನು ಸೆರೆ ಹಿಡಿಯಲು ಮಾತ್ರ ಅನುಮತಿ ದೊರೆತಿದ್ದು, ಮುಂದಿನ ದಿನಗಳಲ್ಲಿ ಮತ್ತೆರಡು ಆನೆಗಳ ಸೆರೆಗೆ ಅನುಮತಿ ಪಡೆಯಲು ಪ್ರಯತ್ನಿಸಲಾಗುವುದು.
-ಸಿ.ಪಿ.ಯೋಗೇಶ್ವರ್, ಶಾಸಕರು, ಚನ್ನಪಟ್ಟಣ.

ಕೆಂಪಿಕಟ್ಟೆಯಲ್ಲಿ ಪತ್ತೆ: ಆರು ಸಾಕಾನೆಗಳ ತಂಡ ತಾಲೂಕಿಗೆ ಬಂದಿಳಿದು ಕೆಂಗಲ್ ಬಳಿ ಪೂಜೆ ಸಲ್ಲಿಸಿ ಚಿಕ್ಕಮಣ್ಣುಗುಡ್ಡೆ ಪ್ರದೇಶದಲ್ಲಿ ಕಾರ್ಯಾಚರಣೆ ಆರಂಭಿಸಿದ ಬಳಿಕ ತಿಮ್ಮೇಗೌಡನದೊಡ್ಡಿ ಬಳಿ ಪತ್ತೆಯಾದ ಒಂಟಿಸಲಗ ಟಸ್ಕರ್ ಆನೆಯನ್ನು ಸೆರೆ ಹಿಡಿದು ಮತ್ತಿಗೋಡು ಆನೆ ಶಿಬಿರಕ್ಕೆ ಸ್ಥಳಾಂತರಿಸಿದರು.

ಡಿಎಫ್‌ಒ ರಾಮಕೃಷ್ಣ, ಆರ್‌ಎಫ್‌ಒ ಮಲ್ಲೇಶ್ ನೇತೃತ್ವದ ಕಾರ್ಯಾಚರಣೆಯಲ್ಲಿ ಪಶುವೈದ್ಯಾಧಿಕಾರಿಗಳು, ಎಲಿಫೆಂಟ್ ಫೋರ್ಸ್ ತಂಡ ಹಾಗೂ ಸುಮಾರು 70 ಮಂದಿ ಸಿಬ್ಬಂದಿ, ಅಧಿಕಾರಿಗಳು ಪಾಲ್ಗೊಂಡಿದ್ದರು.

ಜಾನಪದ ಕಲೆ, ಸಂಸ್ಕೃತಿ ಉಳಿಸಿ ಬೆಳೆಸೋಣ

ಕೋಲಾರ: ಜನಪದ ಕಲಾವಿದರು ಕಲೆಯನ್ನು ಮತ್ತೊಬ್ಬರಿಕೆ ಕಲಿಸುವ ಮೂಲಕ ಜನಪದವನ್ನು ಉಳಿಸಿ ಬೆಳೆಸಬೇಕೆಂದು ಸುಗಟೂರು ಗ್ರಾಮ ಪಂಚಾಯತಿ ಅಧ್ಯಕ್ಷ ಭೂಪತಿಗೌಡ ಹೇಳಿದರು.

ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಅಂಕತಟ್ಟಿ ಜೈ ಕರ್ನಾಟಕ ಮಾತೆ ಸಾಂಸ್ಕೃತಿಕ ಮತ್ತು ಕಲಾ ಭಜನೆ ಸಂಘದಿಂದ ಆಲೇರಿ ಚೌಡೇಶ್ವರಿ ದೇಗುಲದ ಆವರಣದಲ್ಲಿ ನಡೆದ ಜಿಲ್ಲಾ ಮಟ್ಟದ ಜಾನಪದ ಮೇಳ ಉದ್ಘಾಟಿಸಿ ಮಾತನಾಡಿದರು.

ಜಾಗತಿಕ ಯುಗದಲ್ಲಿ ಜನಪದ ಕಲೆಯನ್ನು ಮತ್ತೊಬ್ಬರಿಗೆ ಪರಿಚಯಿಸುವ ಮೂಲಕ ಅಳಿಯುತ್ತಿರುವ ಪುರಾತನ ನೆಲದ ಸಂಸ್ಕೃತಿಯನ್ನು ಮುಂದುವರೆಸಲು ಕಲಾವಿದರು ಮುಂದಾಗಬೇಕೆಂದರು.

ಕಲೆ ಯಾರ ಸ್ವತ್ತೂ ಅಲ್ಲ, ಅದು ಸಾಧಕನ ಸ್ವತ್ತಾಗಿದೆ. ಹಿಂದೆ ಬಾಯಿಂದ ಬಾಯಿಗೆ ಹರಡಿರುವ ಕಲೆ ಇದೀಗ ಮುದ್ರಣ ಮತ್ತು ಡಿಜಿಟಲ್ ವ್ಯವಸ್ಥೆ ತಲುಪಿರುವುದರಿಂದಾಗಿ ಹೆಚ್ಚು ಹೆಚ್ಚಾಗಿ ಜನಪದ ಕಲೆಯನ್ನು ಸಮಾಜಕ್ಕೆ ಪರಿಚಯಿಸುವ ಕೆಲಸ ಆಗಬೇಕಿದ್ದು ಕಲಾವಿದರು ಇದರ ಪರಿಚಾರಕರಾಗಿ ಕೆಲಸ ಮಾಡಬೇಕು. ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಜಾನಪದ ಕಲೆಗಳು ಅಗತ್ಯವಾಗಿದ್ದು ಯುವಜನತೆ ಈ ಬಗ್ಗೆ ಹೆಚ್ಚಿನ ಕಲಿಕೆಯನ್ನು ಮಾಡಬೇಕೆಂದು ಭೂಪತಿಗೌಡ ತಿಳಿಸಿದರು.

ಹಿರಿಯ ಕಲಾವಿದ ಟಿ.ಮುನಿರೆಡ್ಡಿ ಮಾತನಾಡಿ, ತತ್ವಪದ ಗಾಯನದ ಮೂಲಕ ಜನಪದ ಕಲೆಯನ್ನು ಸಭಿಕರಿಗೆ ಪರಿಚಯಿಸಿದರು. ಕಲಾ ಭಜನೆ ಸಂಘದ ಅಧ್ಯಕ್ಷ ಎಂ.ವೆಂಕಟಪ್ಪ, ಕಾರ್ಯ ನಿರ್ವಹಣಾಧಿಕಾರಿ ಎಂ.ಮಂಜುನಾಥ್, ಜಂಟಿ ಕಾರ್ಯದರ್ಶಿ ಹನುಮಾನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಎನ್.ವಿಜಯಲಕ್ಷ್ಮಿ, ಗೋಪಮ್ಮ, ಸದಸ್ಯರಾದ ಗೋಪಾಲಕೃಷ್ಣ,ಕಲಾವಿದ ಎಸ್. ಮುನಿಯಪ್ಪ,ಎಂ.ಮುನಿಯಪ್ಪ, ದೇವಾಲಯದ ಸದಸ್ಯ ಎಂ.ಚೌಡೇಗೌಡ, ಆಲೇರಿ ಬೈರೆಡ್ಡಿ, ನಂಜುಂಡಗೌಡ ಇದ್ದರು.

ಕೋಲಾರದಲ್ಲಿ ನಡೆದ ಜಾನಪದ ಮೇಳವನ್ನು ಪಂಚಾಯತಿ ಅಧ್ಯಕ್ಷ ಭೂಪತಿಗೌಡ ಉದ್ಘಾಟಿಸಿದರು.

ಕಾರ್ಯದರ್ಶಿ ನಮ್ಮ ಕ್ಲಿನಿಕ್ ಪರಿಶೀಲನೆ

ಚಿಕ್ಕಬಳ್ಳಾಪುರ: ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎನ್. ಮಂಜುಳ ಅವರು ಸೋಮವಾರ ನಗರದ 22ನೇ ವಾರ್ಡ್ ನ ನಮ್ಮ ಕ್ಲಿನಿಕ್ ಗೆ ಭೇಟಿ ನೀಡಿ ಅಲ್ಲಿನ ಆರೋಗ್ಯ ಸೇವೆಗಳ ವಿವರವನ್ನು ಪರಿಶೀಲಿಸಿದರು. ಈ ವೇಳೆ ಕೇಂದ್ರಕ್ಕೆ ಆಗಮಿಸಿದ್ದ ರೋಗಿಗಳಿಂದ ಆರೋಗ್ಯ ಚಿಕಿತ್ಸೆಗಳ ಕುರಿತು ಚರ್ಚಿಸಿದರು.ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

ಆಗ್ನೇಯ ಕ್ಷೇತ್ರಕ್ಕೆ ಜೆಡಿಯು ಅಭ್ಯರ್ಥಿ ಡಾ.ಕೆ.ನಾಗರಾಜ್

ಕೋಲಾರ: ಮುಂಬರುವ 2026ರ ವಿಧಾನ ಪರಿಷತ್‌ಗೆ ಆಗ್ನೇಯ ಪದವೀಧರರ ಕ್ಷೇತ್ರದಿಂದ ನಡೆಯಲಿರುವ ಚುನಾವಣೆಯಲ್ಲಿಸಂಯುಕ್ತ ಜನತಾ ದಳ (ಜೆಡಿಯು) ಪಕ್ಷದ ಅಭ್ಯರ್ಥಿಯಾಗಿ ಕಲ್ಲಂಡೂರು ಡಾ.ಕೆ ನಾಗರಾಜ್ ಅವರನ್ನು ಆಯ್ಕೆ ಮಾಡಲಾಗಿದೆ. ಜೆಡಿಯು ರಾಜ್ಯ ಕಾರ್ಯಕಾರಣಿ ಸಭೆಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಮಹಿಮ ಜೆ. ಪಾಟೀಲ್ ಘೋಷಣೆ ಮಾಡಿದ್ದಾರೆ. ಈಗಾಗಲೇ ಎರಡು ಬಾರಿ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿ ಕೆಲವೇ ಮತಗಳಿಂದ ಸೋತಿದ್ದಾರೆ. ಜೆಡಿಯು ರಾಜ್ಯ ಯುವ ಘಟಕದ ಅಧ್ಯಕ್ಷರಾಗಿರುವ ಡಾ.ಕೆ.ನಾಗರಾಜ್ ಪದವೀಧರರು ಮತ್ತು ಶಿಕ್ಷಕರ ಧ್ವನಿಯಾಗಿ ಸೇವೆ ಮಾಡುತ್ತಿದ್ದಾರೆ.



ಅರಣ್ಯ ಜಮೀನಿನ ಕೃಷಿಗೆ ಅಡಚಣೆ ಬೇಡ:ಡಿಸಿ

ಚಿಕ್ಕಬಳ್ಳಾಪುರ: ಶಿಡ್ಲಘಟ್ಟ ತಾಲೂಕಿನ ನೇರಳೆ ಮರದಹಳ್ಳಿ ಗ್ರಾಮದ ಸರ್ವೆ ನಂಬರ್ 103ರಲ್ಲಿನ ಮೀಸಲು ಅರಣ್ಯ ವ್ಯಾಪ್ತಿಯ ಖಾತೆದಾರ ರೈತರು ಜಮೀನಿನಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅಡಚಣೆ ಮಾಡಬಾರದು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾ ಜಿಪಂ ಸಭಾಂಗಣದಲ್ಲಿ ನಡೆದ ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಪ್ರಗತಿ ಪರಿಶೀಲನೆ ನಡೆಸಿ ವಿವಿಧ ಪ್ರಕರಣಗಳ ಕುರಿತು ಚರ್ಚೆ ಮಾಡಿ ಅವರು ಮಾತನಾಡಿದರು.

ಮೀಸಲು ಅರಣ್ಯದ ಒಳಗಡೆ ಇದ್ದಲ್ಲಿ ಅಂತಹ ಜಮೀನನ್ನು ಕಂದಾಯ ಮತ್ತು ಅರಣ್ಯ ಇಲಾಖೆ ಸಮಕ್ಷಮದಲ್ಲಿ ಜಂಟಿ ಸಮೀಕ್ಷೆ ನಡೆಸಿ ವರದಿ ಮಾಡಬೇಕು.ಇಂತಹ ಜಮೀನಿನಲ್ಲಿ ಕೃಷಿ ಚಟುವಟಿಕೆಗಳಲ್ಲಿ ತೊಡಗಿರುವ ರೈತರು ಹೆಚ್ಚಿನ ಆತಂಕಕ್ಕೆ ಒಳಗಾಗುವ ಅಗತ್ಯ ಇಲ್ಲ. ಅಕ್ಕ ಪಕ್ಕದ ಅರಣ್ಯದ ಜಮೀನನ್ನು ಒತ್ತುವರಿ ಮಾಡಬಾರದು ಎಂದು ಮನವಿ ಮಾಡಿದರು.

ಸಭೆಯಲ್ಲಿ ವಿವಿಧ ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯ ನಿವೇಶನ ರಹಿತರಿಗೆ ನಿವೇಶನ, ಸ್ಮಶಾನದ ವಿವಾದಗಳ ವಿಲೇ ಬಗ್ಗೆ, ವಿವಿಧ ಸಮುದಾಯ ಭವನಗಳ ಬಗ್ಗೆ , ಎಸ್ಸಿಎಸ್ಟಿ ದೌರ್ಜನ್ಯ ಪ್ರಕರಣಗಳ ಬಗ್ಗೆ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಯಿತು. ಸಭೆಯಲ್ಲಿ ಜಿಪಂ ಸಿಇಒ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಎಸ್ಪಿ ಕುಶಲ್ ಚೌಕ್ಸೆ, ಎಡಿಸಿ ಡಾ. ಎನ್. ಭಾಸ್ಕರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ ಉಪಸ್ಥಿತರಿದ್ದರು.

ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಚಿಕ್ಕಬಳ್ಳಾಪುರ: ಜಿಲ್ಲಾಡಳಿತದ ವತಿಯಿಂದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿಯವರ ಸಂಸ್ಮರಣಾ ದಿನಾಚರಣೆಯನ್ನು ಜನವರಿ 6 ರಂದು ನಗರದ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

ಪಲ್ಲಕ್ಕಿ ಉತ್ಸವ ಹಾಗೂ ಜಾನಪದ ಕಲಾ ತಂಡಗಳ ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಉದ್ಘಾಟನೆ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ನೆರವೇರಿಸಲಿದ್ದಾರೆ.

ಕನ್ನಡ ಸಂಸ್ಕೃತಿ ಸಚಿವರಾದ ಶಿವರಾಜ್ ಎಸ್ ತಂಗಡಗಿ ಉಪಸ್ಥಿತಿ ನೆರವೇರಿಸಲಿದ್ದಾರೆ.

ಶಾಸಕರಾದ ಪಿ.ಇ. ಪ್ರದೀಪ್ ಈಶ್ವರ್ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಕಟ್ಟಡ ಕಾರ್ಮಿಕ ಶಿಲ್ಪ ಕಲಾ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಕೆ.ಬಿ ನಾಗರಾಜಾಚಾರ್ಯ ಭಾಗವಹಿಸಲಿದ್ದಾರೆ. ಸಮಾಜ ಸೇವಕರಾದ ಅನಿಲ್ ಕುಮಾರ್ ಉಪನ್ಯಾಸವನ್ನು ನೀಡಲಿದ್ದಾರೆ.



ಸಮಾಚಾರ ಸಣ್ಣದಲ್ಲ

ರಾಯರ ಮಠಕ್ಕೆ ಹರಿದುಬಂದ ಭಕ್ತಸಾಗರ

ರಾಯಚೂರು: ಸಾಲುಸಾಲು ರಜೆಗಳಿಂದಾಗಿ ಮಂತ್ರಾಲಯದ ಗುರು ರಾಘವೇಂದ್ರ ಸ್ವಾಮಿ ಮಠಕ್ಕೆ ಭಕ್ತಸಾಗರ ಹರಿದುಬಂದಿದೆ. ಕ್ರಿಸ್‌ಮಸ್ ರಜೆ, ಹೊಸ ವರ್ಷಾಚರಣೆಗೆ ದಿನಗಣನೆ, ಅಮಾವಾಸ್ಯೆ ಹಿನ್ನೆಲೆಯಲ್ಲಿ ರಾಯರ ಮಠದಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿದೆ. ಸಾವಿರಾರು ಭಕ್ತರ ಭೇಟಿಯಿಂದ ರಾಯರ ಮಠ ತುಂಬಿ ತುಳುಕುತ್ತಿದ್ದು, ಮಠದ ವಸತಿಗೃಹಗಳಿಗೆ ಆನ್ ಲೈನ್ ಬುಕಿಂಗ್ ಸ್ಥಗಿತಗೊಳಿಸಲಾಗಿದೆ. ಕೇವಲ ಆಫ್‌ಲೈನ್ ಬುಕಿಂಗ್‌ಗೆ ಮಾತ್ರ ಅವಕಾಶ ನೀಡಲಾಗಿದ್ದು, ಭಕ್ತರು ಕೋಣೆಗಳಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ನಾಟಕ ಕಲಾವಿದ ನೇಣು ಬಿಗಿದು ಆತ್ಮಹತ್ಯೆ

ವಿಟ್ಲ: ವಿಟ್ಲ ಸಮೀಪದ ಅತಿಕಾರಬೈಲಿನ ನಾಟಕ ಕಲಾವಿದರೊಬ್ಬರು ಹಟ್ಟಿಯ ಪಕ್ಕಾಸಿಗೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ನಡೆದಿದೆ.

49 ವರ್ಷದ ವಿಠಲ ಪೂಜಾರಿ ಆತ್ಮಹತ್ಯೆಗೆ ಶರಣಾದವರು. ಯುವ ಕೇಸರಿ ಅತಿಕಾರಬೈಲು ಸಂಘಟನೆಯ ಅಧ್ಯಕ್ಷರಾಗಿ, ನಾಟಕ ಕಲಾವಿದರು ಮತ್ತು ಬಿಲ್ಲವ ಸಂಘದಲ್ಲಿ ತೊಡಗಿಸಿ ಕೊಂಡಿದ್ದ ಪೂಜಾರಿ, ಚಂದಳಿಕೆ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರಾಗಿ, ಊರಿನ ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದರು. ವಿಠಲ ಪೂಜಾರಿ ಆತ್ಮಹತ್ಯೆಗೆ ಕಾರಣ ತಿಳಿದುಬಂದಿಲ್ಲ. ಮೃತರು ಪತ್ನಿ ಮತ್ತು ಇಬ್ಬರು ಮಕ್ಕಳನ್ನು ಅಗಲಿದ್ದಾರೆ.

ವಿರಾಮ
ಪ್ರತಿ ಭಾನುವಾರ

ಸಂಪುಟ ಸಭೆಗೆ ಸಜ್ಜಾದ ಮಹದೇಶ್ವರ ಬೆಟ್ಟ

ಜನವರಿ 3ನೇ ವಾರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆ । ಚಾಮರಾಜನಗರಕ್ಕೆ ವಿಶೇಷ ಪ್ಯಾಕೇಜ್ ಘೋಷಣೆಯ ಸಾಧ್ಯತೆ

ಬೆಂಗಳೂರು: ಚಾಮರಾಜನಗರ ಜಿಲ್ಲೆಗೆ ಹೋದರೆ ಮುಖ್ಯಮಂತ್ರಿ ಸ್ಥಾನ ಹೋಗುತ್ತದೆ ಎನ್ನುವ ಕಾರಣಕ್ಕೆ ಅದೆಷ್ಟೋ ಮುಖ್ಯಮಂತ್ರಿಗಳು ಚಾಮರಾಜನಗರಕ್ಕೆ ತೆರಳಲು ಹಿಂದೇಟು ಹಾಕುತ್ತಾರೆ. ಆದರೆ ಸಿಎಂ ಸಿದ್ದರಾಮಯ್ಯ ಅವರೀಗ, ಅದೇ ಜಿಲ್ಲೆಯಲ್ಲಿ ಸಚಿವ ಸಂಪುಟ ಸಭೆ ನಡೆಸುವ ಮಹತ್ವದ ತೀರ್ಮಾನ ಕೈಗೊಂಡಿದ್ದಾರೆ.

ಚಾಮರಾಜನಗರ ಜಿಲ್ಲೆಯ ಪ್ರಮುಖ ಪ್ರೇಕ್ಷಣೀಯ ಸ್ಥಳವಾಗಿರುವ ಮಲೆಮಹದೇಶ್ವರ ಬೆಟ್ಟದಲ್ಲಿ ಜನವರಿ ಮೂರನೇ ವಾರ ಸಚಿವ ಸಂಪುಟ ಸಭೆ ನಡೆಸಲು ಸರಕಾರ ತೀರ್ಮಾನಿಸಿದ್ದು, ಈಗಾಗಲೇ ಅಗತ್ಯ ಸಿದ್ಧತೆ ಆರಂಭಿಸಿದೆ. 2002ರಲ್ಲಿ ಎಸ್.ಎಂ. ಕೃಷ್ಣ ಅವರು ಬಿಳಿಗಿರಿರಂಗನ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿದ್ದರು. ಬಳಿಕ ಜಿಲ್ಲೆಯಲ್ಲಿ ನಡೆಯುತ್ತಿರುವ ಎರಡನೇ ಸಚಿವ ಸಂಪುಟ ಸಭೆ ಇದಾಗಿದೆ.

ಮಲೆಮಹದೇಶ್ವರ ಬೆಟ್ಟದಲ್ಲಿ ನಡೆಯುತ್ತಿರುವ ಮೊದಲ ಸಚಿವ ಸಂಪುಟ ಸಭೆ ಇದಾಗಿರುವುದರಿಂದ, ಜಿಲ್ಲೆಯ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಈಗಾಗಲೇ ಭರದ ಸಿದ್ಧತೆ ಆರಂಭವಾಗಿದೆ. ಸಂಪುಟ ಸಭೆಯ ಬೆನ್ನಲ್ಲೇ, ಬೆಟ್ಟದಲ್ಲಿ ಮೂಲಸೌಕರ್ಯಕ್ಕೆ ಅಗತ್ಯ ಸಿದ್ಧತೆ ನಡೆಸಿಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಎಸ್.ಎಂ.ಕೃಷ್ಣ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸೋಲಿಗರು, ಗಿರಿಜನರಿಗೆ ಅನುಕೂಲವಾಗುವಂತಹ ಹಲವಾರು ವಿಚಾರಗಳನ್ನು ಪ್ರಸ್ತಾಪಿಸಲಾಗಿತ್ತು.

ಸಿಎಂಗೆ ಇಷ್ಟದ ಜಿಲ್ಲೆ

ಚಾಮರಾಜನಗರಕ್ಕೆ ತೆರಳಿದರೆ ಮುಖ್ಯಮಂತ್ರಿ ಸ್ಥಾನವನ್ನು ಕಳೆದುಕೊಳ್ಳುವ ಸಾಧ್ಯತೆಯಿದೆ ಎಂದು ಅನೇಕ ಮುಖ್ಯಮಂತ್ರಿಗಳು ಚಾಮರಾಜನಗರಕ್ಕೆ ತೆರಳಿಲ್ಲ. ಆದರೆ ಇದಕ್ಕೆ ವ್ಯತಿರಿಕ್ತ ಎನ್ನುವಂತೆ ಸಿದ್ದರಾಮಯ್ಯ ಅವರಿಗೆ ಚಾಮರಾಜನಗರದ ಬಗ್ಗೆ ವಿಶೇಷ ಒಲವು. ಮೊದಲ ಬಾರಿ ಹಾಗೂ ಎರಡನೇ ಬಾರಿಗೆ ಮುಖ್ಯಮಂತ್ರಿಯಾದಾಗಲೂ ಸಿದ್ದರಾಮಯ್ಯ ಅವರು ಹಲವು ಭಾರಿ ಚಾಮರಾಜನಗರಕ್ಕೆ ಭೇಟಿ ನೀಡುವ ಮೂಲಕ ಮೌಢ್ಯಕ್ಕೆ ತಿಲಾಂಜಲಿ ಹಾಡಿದ್ದರು.

ವಿಶೇಷ ಪ್ಯಾಕೇಜ್ ಸಾಧ್ಯತೆ

ಮೂಲಗಳ ಪ್ರಕಾರ ಚಾಮರಾಜನಗರ ಜಿಲ್ಲೆಗೆ ಈ ಸಚಿವ ಸಂಪುಟ ಸಭೆಯಲ್ಲಿ ವಿಶೇಷ ಪ್ಯಾಕೇಜ್ ಅನ್ನು ಘೋಷಣೆ ಮಾಡುವ ಸಾಧ್ಯತೆಯಿದೆ. ಈ ಸಂಬಂಧ ಈಗಾಗಲೇ ಜಿಲ್ಲೆಗೆ ಯಾವೆಲ್ಲ ಇಲಾಖೆಯಿಂದ ಯಾವೆಲ್ಲ ಯೋಜನೆಗಳಾಗ ಬೇಕು ಎನ್ನುವ ಬಗ್ಗೆ ಜಿಲ್ಲಾಡಳಿತ ವರದಿ ನೀಡಿದ್ದು, ಈ ವರದಿಯಲ್ಲಿರುವ ಹಲವು ಯೋಜನೆಗಳಿಗೆ ಸಂಪುಟದಲ್ಲಿ ಅಸ್ತು ಎನ್ನುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

